ಸಂಪುಟ : 10 ಸಂಚಿಕೆ: 204 ಪುಟ : 4+2 ಬೆಲೆ: 3.00 ರವಿವಾರ ಸೆಪ್ಟೆಂಬರ್ 21 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ


ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 10 Issue : 204 Pages : 4+2 Price : 3.00 Sunday September 21 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




### ತಾಲೂಕು ಕುರುಬರ ಸಂಘದ ರಜತ ಮಹೋತ್ಸವ, ರಾಜ್ಯಮಟ್ಟದ ಕನಕೋತ್ಸವ, ಫಕೀರಪ್ಪ ಹೆಬಸೂರ ಅವರ ಅಭಿನಂದನಾ ಗ್ರಂಥ ಬಿಡುಗಡೆ ಸಮಾರಂಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ

# ಪ್ರತಿಯೊಬ್ಬರೂ ಶಿಕ್ಷಣವಂತರಾಗಿ, ವೈಚಾರಿಕ ಪ್ರಜ್ಞೆ ಬೆಳೆಸಿಕೊಳ್ಳಿ



**■ ವಿಜಯಸಾಕ್ಷಿ ಸುದ್ದಿ, ಗದಗ**

ಅಂಬೇಡ್ಕರ್ ಅವರು 'ಶಿಕ್ಷಣ, ಸಂಘಟನೆ, ಹೋರಾಟ' ಎನ್ನುವ ಮಂತ್ರಗಳನ್ನು ನೀಡಿದ್ದಾರೆ. ಪ್ರತಿಯೊಬ್ಬರೂ ಶಿಕ್ಷಣವಂತರಾಗಿ ವೈಚಾರಿಕ ಪ್ರಜ್ಞೆ ಬೆಳೆಸಿಕೊಳ್ಳಬೇಕು. ದೇವರು ಯಾವುದೇ ಜಾತಿ ಅಥವಾ ಅಸಮಾನತೆಯನ್ನು ಸೃಷ್ಟಿಸಿಲ್ಲ, ಇವೆಲ್ಲವೂ ಮನುಷ್ಯರು ತಮ್ಮ ಸ್ವಾರ್ಥಕ್ಕಾಗಿ ಮಾಡಿಕೊಂಡಿದ್ದಾರೆ ಎನ್ನುವುದನ್ನು ಅರ್ಥ ಮಾಡಿಕೊಳ್ಳಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಶನಿವಾರ ನಗರದ ಕನಕ ಭವನದ ರಾಕೇಶ ಸಿದ್ದರಾಮಯ್ಯ ಸಭಾಂಗಣದಲ್ಲಿ ಗದಗ ತಾಲೂಕು ಕುರುಬರ ಸಂಘದ ರಜತ ಮಹೋತ್ಸವ, ಸ್ಮರಣ ಸಂಚಿಕೆ ಬಿಡುಗಡೆ, ರಾಜ್ಯಮಟ್ಟದ ಕನಕೋತ್ಸವ ಹಾಗೂ ಸಂಘಜೀವಿ ಫಕೀರಪ್ಪ ಹೆಬಸೂರ ಅವರ ಅಭಿನಂದನಾ ಗ್ರಂಥ ಬಿಡುಗಡೆ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಜಾತಿ ವ್ಯವಸ್ಥೆ ಆಳವಾಗಿ ಬೇರೂರಿರುವ ಭಾರತದಲ್ಲಿ, ಶೋಷಿತ ಮತ್ತು ಅವಕಾಶ ವಂಚಿತರು ಸಂವಿಧಾನಬದ್ಧ ಹಕ್ಕುಗಳನ್ನು ಪಡೆಯಲು ಸಂಘಟಿತರಾಗುವುದು ಅನಿವಾರ್ಯವಾಗಿದೆ. ಸರ್ಕಾರದ ಗ್ಯಾರಂಟಿ ಯೋಜನೆಗಳು ಆರ್ಥಿಕ ಅಸಮಾನತೆಯನ್ನು ದೂರ ಮಾಡಲು ಜಾರಿಗೊಳಿಸಲಾಗಿದೆ. ಗ್ಯಾರಂಟಿ ಯೋಜನೆಗಳಿಗೆ 1 ಲಕ್ಷ ಕೋಟಿ ರೂಪಾಯಿಗೂ ಹೆಚ್ಚು ಹಣ ವ್ಯಯಿಸಲಾಗುತ್ತಿದೆ. ಈ ಯೋಜನೆಗಳಿಂದ ಬೆಂಗಳೂರಿನಲ್ಲಿ ಮಹಿಳಾ ಉದ್ಯೋಗ ಶೇ.23 ಮತ್ತು ಹುಬ್ಬಳ್ಳಿ-ಧಾರವಾಡದಲ್ಲಿ ಶೇ.21ರಷ್ಟು ಹೆಚ್ಚಾಗಿದೆ. ತಲಾ ಆದಾಯದಲ್ಲಿ ಕರ್ನಾಟಕ ದೇಶದಲ್ಲಿಯೇ ನಂಬರ್ ಒನ್ ಸ್ಥಾನಕ್ಕೆ ಏರಿಕೆಯಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಕನಕ ಭವನ ನಿರ್ಮಾಣಕ್ಕೆ ಭೂದಾನ ಮಾಡಿದ ಈಶ್ವರಸಾ ಮೆರವಾಡೆ ಅವರನ್ನು ಸನ್ಮಾನಿಸಲಾಯಿತು. ಫಕೀರಪ್ಪ ಹೆಬಸೂರ ಅವರ ಕುರಿತಾದ 'ಸಮಾಜಮುಖಿ' ಅಭಿನಂದನಾ ಗ್ರಂಥ, 'ಬೆಳ್ಳಿ ಬೆಡಗು' ಸ್ಮರಣ ಸಂಚಿಕೆ ಬಿಡುಗಡೆಗೊಳಿಸಲಾಯಿತು. ಸಿಎಂ ಸಿದ್ದರಾಮಯ್ಯ ಅವರಿಗೆ ಕುರುಬರ ಸಂಘದ ಸದಸ್ಯರು ಬೆಳ್ಳಿ ಗದೆ ನೀಡಿ ಸನ್ಮಾನಿಸಿದರು.

ಸರಕಾರದ ಮುಖ್ಯ ಸಚೇತಕ, ವಿಧಾನ ಪರಿಷತ್ ಸದಸ್ಯ ಸಲೀಂ ಅಹ್ಮದ್ ಅವರು ಸಂಘದ ಶ್ರೇಯೋಭಿವೃದ್ಧಿಗೆ 10 ಲಕ್ಷ ರೂ. ನೆರವು ನೀಡುವುದಾಗಿ ವಾಗ್ದಾನ ಮಾಡಿದರು.

ಸಮಾರಂಭದಲ್ಲಿ ರೋಣ ಶಾಸಕ ಜಿ.ಎಸ್. ಪಾಟೀಲ, ನವಲಗುಂದ ಶಾಸಕ ಎನ್.ಎಚ್. ಕೋನರೆಡ್ಡಿ, ರಾಘವೇಂದ್ರ ಹಿಟ್ನಾಳ, ಸರಕಾರದ ಮುಖ್ಯ ಸಚೇತಕ ಸಲೀಂ ಅಹ್ಮದ್, ಗ್ಯಾರಂಟಿ ಅನುಷ್ಠಾನ ಸಮಿತಿ ರಾಜ್ಯಾಧ್ಯಕ್ಷ ಎಚ್.ಎಂ. ರೇವಣ್ಣ, ಮಾಜಿ ಶಾಸಕರಾದ ▸▸ 3ನೇ ಪುಟಕ್ಕೆ

> ರಾಜಕೀಯವನ್ನು ಮೀರಿ ಜನರ ಬದುಕಿನ ಬಗ್ಗೆ ಚಿಂತನೆ ಮಾಡುವವರು, ಯೋಜನೆಗಳನ್ನು ರೂಪಿಸಿ, ಅದನ್ನು ಗಟ್ಟಿಯಾಗಿ ಜಾರಿಗೊಳಿಸುವವರು ಸಿದ್ದರಾಮಯ್ಯ. ಹೀಗಾಗಿ ಅವರನ್ನು ಒಬ್ಬ ರಾಜಕಾರಣಿ ಎನ್ನುವುದಕ್ಕಿಂತ ಸಮಾಜ ಸುಧಾರಕ ಎಂದರೆ ತಪ್ಪಾಗಲಾರದು. ರಾಜ್ಯದಲ್ಲಿ ಬಡತನವನ್ನು ಬೇರು ಸಹಿತ ಕಿತ್ತೊಗೆದ ಕೀರ್ತಿ ಕೀರ್ತಿ ಸಿದ್ದರಾಮಯ್ಯ ಅವರಿಗೆ ಸಲ್ಲುತ್ತದೆ.
>
> **– ಎಚ್.ಕೆ. ಪಾಟೀಲ.**
> ಕಾನೂನು, ಪ್ರವಾಸೋದ್ಯಮ ಸಚಿವರು.

> ಚುನಾವಣೆಯಲ್ಲಿ ಮೊದಲ ಓಟು ಕುರುಬರದ್ದು. ಸಾಲ ಕೊಟ್ಟರೆ ವಾಪಸ್ ಕೊಡುವವರು ಕುರುಬರು. ಆದರೆ ಓಟು ಹಾಕಿಸಿಕೊಂಡು ಗೆದ್ದ ನಂತರ, ಏನಾದರೂ ಸಹಾಯ ಕೇಳಿಕೊಂಡು ಹೋದರೆ, ಸ್ವತಃ ನಮ್ಮ ಕಾಂಗ್ರೆಸ್ ಶಾಸಕರೇ ಸಿದ್ದರಾಮಯ್ಯ ಬಳಿ ಹೋಗಿ ಎನ್ನುವುದನ್ನು ಕೇಳಿದ್ದೇನೆ. ನೀವು (ಶಾಸಕರು) ಗೆದ್ದಿರುವುದು ಸಿದ್ದರಾಮಯ್ಯ ಅವರಿಂದ ಎನ್ನುವುದನ್ನು ಅರ್ಥ ಮಾಡಿಕೊಂಡು, ನಾವು ಕೇವಲ ಓಟಿಗಾಗಿ ಇಲ್ಲ, ನಮಗೂ ರಾಜಕೀಯ ಶಕ್ತಿ ಕೊಡಿ ಎಂದು ಮಾಜಿ ಶಾಸಕ ಡಿ.ಆರ್. ಪಾಟೀಲ ಅವರಿಗೆ ಎಚ್.ಎಂ. ರೇವಣ್ಣ ವಿನಂತಿಸಿದರು. ಫಕೀರಪ್ಪ ಹೆಬಸೂರ ಅವರು ತಮ್ಮ ಭಾಷಣದಲ್ಲಿ ತಮಗೂ ರಾಜಕೀಯ ಶಕ್ತಿ ಕೊಡಬೇಕು ಎಂದು ಸಚಿವ ಎಚ್.ಕೆ. ಪಾಟೀಲರಲ್ಲಿ ವಿನಂತಿಸಿದರು.



### ಅವಕಾಶ ವಂಚಿತರಿಗೆ ಸಮಾನ ಅವಕಾಶಗಳನ್ನು ನೀಡಲು ಸಮೀಕ್ಷೆ ಅಗತ್ಯ: ಸಿಎಂ ಸಿದ್ದರಾಮಯ್ಯ

# ಇದು ಕೇವಲ ಜಾತಿ ಸಮೀಕ್ಷೆಯಲ್ಲ



**■ ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದಲ್ಲಿ ನಡೆಸಲು ಉದ್ದೇಶಿಸಿರುವ ಸಮೀಕ್ಷೆ ಕೇವಲ ಜಾತಿ ಸಮೀಕ್ಷೆಯಾಗಿರದೇ, ಆರ್ಥಿಕ, ಸಾಮಾಜಿಕ ಹಾಗೂ ಶೈಕ್ಷಣಿಕ ಸಮೀಕ್ಷೆಯಾಗಿದೆ. ಜನರ ಜಾತಿಯ ವಿವರ ಪಡೆಯುವ ಜೊತೆಗೆ ಅವರ ಆರ್ಥಿಕ, ಸಾಮಾಜಿಕ ಹಾಗೂ ಶೈಕ್ಷಣಿಕ ಸ್ಥಿತಿಗತಿಗಳ ವಿವರ ಪಡೆದು, ಅವಕಾಶ ವಂಚಿತರಿಗೆ ಸಮಾನ ಅವಕಾಶಗಳನ್ನು ನೀಡಲು ಈ ಸಮೀಕ್ಷೆಯನ್ನು ನಡೆಸಲಾಗುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಶನಿವಾರ ಗದುಗಿನ ಸರ್ಕ್ಯೂಟ್ ಹೌಸ್‌ನಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು.

ಜಾತಿ ಸಮೀಕ್ಷೆಯಲ್ಲಿ ಕ್ರಿಶ್ಚಿಯನ್ ಅಡಿಯಲ್ಲಿ ವಿವಿಧ ಜಾತಿಗಳನ್ನು ಉಲ್ಲೇಖಿಸಲಾಗುವುದೇ ಎಂಬುದಕ್ಕೆ ಉತ್ತರಿಸಿ, ಇದರ ಬಗ್ಗೆ ಅಭಿಪ್ರಾಯಗಳನ್ನು ತಿಳಿಸಲಾಗಿದ್ದು, ಅನಗತ್ಯವಿರುವ ಅಂಶಗಳನ್ನು ತೆಗೆದುಹಾಕಲು ಹಿಂದುಳಿದ ವರ್ಗಗಳ ಆಯೋಗವೇ ನಿರ್ಧರಿಸುತ್ತದೆ. ಆಯೋಗವು ಶಾಸನಬದ್ಧ ಸಂಸ್ಥೆಯಾಗಿದ್ದು, ಸಮೀಕ್ಷೆ ನಡೆಸಲು ಮಾರ್ಗಸೂಚಿಗಳನ್ನಷ್ಟೇ ಸರ್ಕಾರ ನೀಡಿದೆ. 1,75,000 ಶಿಕ್ಷಕರನ್ನು ಸಮೀಕ್ಷಾ ಕಾರ್ಯಕ್ಕೆ ನಿಯೋಜಿತರಾಗಿದ್ದಾರೆ. ಒಬ್ಬ ಶಿಕ್ಷಕರು ತಲಾ 150 ಮನೆಗಳಿಂದ ಮಾಹಿತಿ ಸಂಗ್ರಹಿಸಲಿದ್ದು, ಈ ಸಮೀಕ್ಷಾ ಕಾರ್ಯ 15 ದಿನಗಳ ಕಾಲ ನಡೆಯಲಿದೆ. ಸಮೀಕ್ಷೆಯಲ್ಲಿ ಧರ್ಮ, ಜಾತಿ, ಉಪಜಾತಿ, ಶಿಕ್ಷಣ, ಉದ್ಯೋಗ ಸೇರಿದಂತೆ ಹಲವು ಮಾಹಿತಿಗಳನ್ನು ಕಲೆಹಾಕಲಿದ್ದಾರೆ ಎಂದರು.

ಜಾತಿಗಣತಿಯ ಹಿಂದೆ ಷಡ್ಯಂತ್ರವಿದೆ ಎಂದು ವಚನಾನಂದ ಸ್ವಾಮೀಜಿಗಳು ಆರೋಪಿಸಿರುವುದಕ್ಕೆ ಪ್ರತಿಕ್ರಿಯೆ ನೀಡಿ, ಕೇಂದ್ರ ಸರ್ಕಾರವೂ ಜಾತಿಸಮೀಕ್ಷೆ ನಡೆಸಲಿದ್ದು, ಅದರಲ್ಲಿಯೂ ▸▸ 3ನೇ ಪುಟಕ್ಕೆ

> ರಸ್ತೆ ಗುಂಡಿಗಳ ಬಗ್ಗೆ ಬಿಜೆಪಿಯವರು ರಾಜ್ಯಾದ್ಯಂತ ಪ್ರತಿಭಟನೆ ಹಮ್ಮಿಕೊಂಡಿರುವ ಬಗ್ಗೆ ಪ್ರತಿಕ್ರಿಯಿಸಿ, ಈ ಬಾರಿ ರಾಜ್ಯದಲ್ಲಿ ಹೆಚ್ಚಿನ ಮಳೆಯಾಗಿರುವ ಕಾರಣ, ರಸ್ತೆಗಳು ಹಾಳಾಗಿರುವುದು ನಿಜ. ಈ ಬಗ್ಗೆ ಬೆಂಗಳೂರು ಸೇರಿದಂತೆ ವಿವಿಧ ಜಿಲ್ಲೆಗಳ ಪರಿಸ್ಥಿತಿ ಬಗ್ಗೆ ಸಭೆ ನಡೆಸಿ, ಸೂಕ್ತ ಕ್ರಮ ತೆಗೆದುಕೊಳ್ಳಲು ಸೂಚನೆ ನೀಡಲಾಗುವುದು. ಬಿಜೆಪಿ ತನ್ನ ಅಧಿಕಾರಾವಧಿಯಲ್ಲಿ ಒಂದು ರಸ್ತೆಯನ್ನೂ ನಿರ್ಮಿಸಿಲ್ಲ, ರಸ್ತೆ ಗುಂಡಿಗಳನ್ನೂ ಮುಚ್ಚಿಲ್ಲ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.

> ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿಯವರು ಮತಗಳ್ಳತನದ ಬಗ್ಗೆ ಮಾಡಿರುವ ಆರೋಪದ ಕುರಿತ ಪ್ರಶ್ನೆಗೆ ಉತ್ತರಿಸಿದ ಸಿಎಂ, ರಾಹುಲ್ ಗಾಂಧಿಯವರು ಅಳಂದ ಕ್ಷೇತ್ರದಲ್ಲಿ ಸುಮಾರು 6 ಸಾವಿರ ಮತದಾರರ ಹೆಸರನ್ನು ಕೈಬಿಟ್ಟಿರುವ ಮತಗಳ್ಳತನದ ವಿಚಾರವನ್ನು ಉಲ್ಲೇಖಿಸಿದ್ದು, ಇದು ಸತ್ಯವಾಗಿದೆ. ಆಳಂದದಲ್ಲಿರುವ ಮತಗಳ್ಳತನ ಪ್ರಕರಣದ ಬಗ್ಗೆ ಎಸ್‌ಐಟಿ ತನಿಖೆ ನಡೆಯಲಿದೆ ಎಂದರು.

# ವಿದ್ಯಾರ್ಥಿಗಳಿಗೆ ಉಚಿತ ತರಬೇತಿ ಕಾರ್ಯಾಗಾರ



**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಪಿಎಂಶ್ರೀ ಸಹಿಪ್ರಾ ಶಾಲೆ ನಂ-04ರಲ್ಲಿ ಶನಿವಾರ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಶಿರಹಟ್ಟಿ ಹಾಗೂ ಕ.ರಾ.ಸ.ನೌ ಸಂಘದಿಂದ ಎನ್‌ಎಂಎಂಎಸ್ ಪರೀಕ್ಷಾ ವಿದ್ಯಾರ್ಥಿಗಳಿಗೆ ಉಚಿತ ತರಬೇತಿ ಕಾರ್ಯಾಗಾರ ಹಾಗೂ ನೋಟ್‌ಬುಕ್ ವಿತರಣಾ ಕಾರ್ಯಕ್ರಮ ಜರುಗಿತು.

ತಾ.ಪಂ ಇಓ ಕೃಷ್ಣಪ್ಪ ಧರ್ಮರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ನೌಕರರ ಸಂಘವು 8ನೇ ತರಗತಿ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿರುವ ಎನ್‌ಎಂಎಂಎಸ್ ಪರೀಕ್ಷಾ ಕಾರ್ಯಾಗಾರವು ಪೂರಕವಾಗಿದೆ. ಮಕ್ಕಳಲ್ಲಿನ ಪ್ರತಿಭೆ ಅನಾವರಣ, ಪ್ರೋತ್ಸಾಹಕ್ಕೆ ಪೂರಕವಾದ ಈ ಪರೀಕ್ಷೆಯಲ್ಲಿ ಹೆಚ್ಚಿನ ಮಕ್ಕಳು ಪಾಲ್ಗೊಳ್ಳುವಂತಾಗಬೇಕು ಎಂದರು.

ನೌಕರ ಸಂಘದ ಅಧ್ಯಕ್ಷ ಗುರುರಾಜ ಹವಳದ ಮಾತನಾಡಿ, ಎನ್‌ಎಂಎಂಎಸ್ ವಿದ್ಯಾರ್ಥಿಗಳು ಶಿಬಿರದ ಪ್ರಯೋಜನ ಪಡೆದು ಪರೀಕ್ಷೆಯಲ್ಲಿ ಯಶಸ್ಸು ಕಾಣಲಿ. ಪ್ರಾಮಾಣಿಕ ಪ್ರಯತ್ನ, ಉತ್ತಮ ಮಾರ್ಗದರ್ಶನದಿಂದ ಯಶಸ್ಸು ಸಾಧ್ಯ. ವಿದ್ಯಾಭ್ಯಾಸದಲ್ಲಿ ವಿನಯ, ವಿಧೇಯತೆ ಮುಖ್ಯ. ಸ್ಪರ್ಧಾತ್ಮಕ ಪರೀಕ್ಷೆಗೆ ದಿಕ್ಸೂಚಿಯಾಗಿ ಸರ್ಕಾರ ಇದನ್ನು ಮಾಡುತ್ತಿರುವುದರಿಂದ ಬಡವರ ಮಕ್ಕಳ ಪಾಲಿಗೆ ಆಶಾಕಿರಣವಾಗಿದೆ ಎಂದರು.

ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಬಸವರಾಜ ಹರ್ಲಾಪೂರ ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎಚ್.ಬಿ. ಸಣ್ಣಮನಿ ವಹಿಸಿದ್ದರು. ನೌಕರ ಸಂಘದ ಎಂ.ಎ. ನದಾಫ್, ಎಂ.ಡಿ. ವಾರದ, ಡಿ.ಡಿ. ಲಮಾಣಿ, ಎಲ್.ಎನ್. ನಂದೆಣ್ಣವರ, ಎಸ್‌ಡಿಎಂಸಿ ಅಧ್ಯಕ್ಷ ಶಿವಾನಂದ ಚಕ್ರಸಾಲಿ, ಎಸ್.ಕೆ. ಹವಾಲ್ದಾರ, ಎಂ.ಎಸ್. ಹಿರೇಮಠ, ಜಿ.ಎಸ್. ಗುಡಗೇರಿ, ಎಸ್.ಡಿ. ಲಮಾಣಿ, ಎ.ಎಂ. ಅಕ್ಕಿ, ಬಿ.ಎಂ. ಯರಗುಪ್ಪಿ, ಶ್ರೀಕಾಂತ್ ಬಾಲೆಹೊಸೂರು, ಮಂಜುನಾಥ ಚವ್ಹಾಣ, ಸಂತೋಷ ಗುಂಜಳ ಸೇರಿ ಮಕ್ಕಳು ಭಾಗವಹಿಸಿದ್ದರು.

### 20ನೇ ವಾರ್ಡ್‌ನ ವಾರ್ಡ್ ಸಭೆಯಲ್ಲಿ ಹಿರಿಯ ಮುಖಂಡ ಪೂರ್ಣಾಜಿ ಖರಾಟೆ ಮನವಿ

# ಚಿಕನ್ ಅಂಗಡಿಗಳನ್ನು ಸ್ಥಳಾಂತರಿಸಿ



**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ವಾರ್ಡ್ ನಂ. 20ರಲ್ಲಿನ ಪುರಸಭೆ ವಾಣಿಜ್ಯ ಸಂಕೀರ್ಣ ಹಾಗೂ ಸುತ್ತಮುತ್ತಲು ಚಿಕನ್ ಅಂಗಡಿಗಳಿಂದ ದುರ್ನಾತ ಬೀರುತ್ತಿದ್ದು, ರೋಗ-ರುಜಿನಗಳ ತಾಣವಾಗಿದೆ. ಇಲ್ಲಿನ ನಿವಾಸಿಗಳ ನಿತ್ಯ ಸಹಿಸಲಾರದ ಯಾತನೆ ಅನುಭವಿಸುತ್ತಿದ್ದಾರೆ. ಕೂಡಲೇ ಅವುಗಳನ್ನು ಸ್ಥಳಾಂತರಿಬೇಕು ಎಂದು ನಿವಾಸಿಗಳ ಪರವಾಗಿ ಹಿರಿಯ ಮುಖಂಡ ಹಾಗೂ ನಿವೃತ್ತ ಶಿಕ್ಷಕ ಪೂರ್ಣಾಜಿ ಖರಾಟೆ ಪುರಸಭೆ ಮುಖ್ಯಾಧಿಕಾರಿಗಳಿಗೆ ಮನವಿ ಮಾಡಿದರು.

> ಪುರಸಭೆ ಮುಖ್ಯಾಧಿಕಾರಿ ಮಹಾಂತೇಶ ಬೀಳಗಿ ಮಾತನಾಡಿ, ಪಟ್ಟಣದ ವಾರ್ಡ್‌ಗಳಲ್ಲಿರುವ ಸಮಸ್ಯೆಗಳನ್ನು ಅರಿಯಲು ವಾರ್ಡ್ ಸಭೆ ಮಾಡಲಾಗುತ್ತಿದೆ. ವಾರ್ಡ್‌ನ ಸದಸ್ಯರು, ಹಿರಿಯರು ಸಮಸ್ಯೆಗಳ ಬಗ್ಗೆ ತಿಳಿಸಿದ್ದಾರೆ. ಆಯಾ ವಾರ್ಡ್‌ಗಳ ಸಮಸ್ಯೆಗಳನ್ನು ಈಡೇರಿಸುವದು ಹಾಗೂ ತುರ್ತು ಕಾರ್ಯಗಳನ್ನು ಪೂರೈಸಲು ಆದ್ಯತೆ ನೀಡಲಾಗುತ್ತದೆ. ಇದಕ್ಕೆ ಎಲ್ಲರ ಸಹಕಾರ ಅಗತ್ಯ ಎಂದು ಹೇಳಿದರು.

ಅವರು ಪಟ್ಟಣದ 20ನೇ ವಾರ್ಡ್‌ನ ಏಳುಮಕ್ಕಳ ತಾಯಿ ದೇವಸ್ಥಾನದಲ್ಲಿ ಶನಿವಾರ ನಡೆದ ವಾರ್ಡ್ ಸಭೆಯಲ್ಲಿ ಮಾತನಾಡಿ, ವಾರ್ಡ್‌ನಲ್ಲಿ ಜನವಸತಿ, ದೇವಸ್ಥಾನ, ಶುದ್ಧ ಕುಡಿಯುವ ನೀರಿನ ಘಟಕ, ಔಷಧಿ, ಬೇಕರಿ, ಹಣ್ಣು ಇತರೆಲ್ಲ ವ್ಯಾಪಾರ ಮಳಿಗೆಯ ಸುತ್ತಲೂ, ರಸ್ತೆ ಚಿಕನ್, ಎಗ್‌ರೈಸ್, ಸರಾಯಿ ಅಂಗಡಿಗಳ ಹಾವಳಿ ಹೆಚ್ಚಾಗಿದೆ. ಎಲ್ಲ ರೀತಿಯ ವ್ಯಾಪಾರಸ್ಥರು ತ್ಯಾಜ್ಯ ತಂದು ವಾಣಿಜ್ಯ ಸಂಕೀರ್ಣದ ಸ್ಥಳದಲ್ಲಿ ಹಾಕಿ ತ್ಯಾಜ್ಯ ವಿಲೇವಾರಿ ತಾಣವಾಗಿಸಿದ್ದಾರೆ. ▸▸ 3ನೇ ಪುಟಕ್ಕೆ

### ಸಿಎಂ ಸಿದ್ದರಾಮಯ್ಯರಿಂದ 'ಪ್ರಭುವಿನೆಡೆಗೆ ಪ್ರಭುತ್ವ' ಕಾರ್ಯಕ್ರಮದ ನಿಯಂತ್ರಣ ಕೇಂದ್ರ ಉದ್ಘಾಟನೆ

# ಸಾರ್ವಜನಿಕರ ಸಮಸ್ಯೆಗಳ ತ್ವರಿತ ಪರಿಹಾರಕ್ಕೆ ಪೂರಕವಾಗಲಿ




**■ ವಿಜಯಸಾಕ್ಷಿ ಸುದ್ದಿ, ಗದಗ**

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶನಿವಾರ ನಗರದ ಜವಳಗಲ್ಲಿಯಲ್ಲಿನ 'ಪ್ರಭುವಿನೆಡೆಗೆ ಪ್ರಭುತ್ವ' ಕಾರ್ಯಕ್ರಮ ಯಂತ್ರ ಹಾಗೂ ಇಂದಿರಾವನವನ್ನು ವೀಕ್ಷಣೆ ಮಾಡಿದರು. ನಂತರ ಎಸ್‌ಪಿ ಕಚೇರಿಯಲ್ಲಿ ಪ್ರಭುವಿನೆಡೆಗೆ ಪ್ರಭುತ್ವ ಕಾರ್ಯಕ್ರಮ ನಿಯಂತ್ರಣ ಕೇಂದ್ರವನ್ನು ಉದ್ಘಾಟಿಸಿದರು.

ಸಿಎಂ ಸಿದ್ಧರಾಮಯ್ಯ ಅವರು ಜವಳಗಲ್ಲಿಯಲ್ಲಿನ ಪ್ರಭುವಿನೆಡೆಗೆ ಪ್ರಭುತ್ವದ ಕಾರ್ಯಕ್ರಮದ ಯಂತ್ರದ ಬಟನ್ ಒತ್ತುವ ಮೂಲಕ ಜಿಲ್ಲೆಯ ಜನಸಂಖ್ಯೆ ವಿವರಗಳನ್ನು ನೀಡುವಂತೆ ಕೋರಿದರು. ನಂತರ ಇಂದಿರಾವನ ವೀಕ್ಷಣೆ ನಡೆಸಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿಗೆ ತೆರಳುವಷ್ಟರಲ್ಲಿ ಸಿಎಂ ಸಿದ್ಧರಾಮಯ್ಯ ಅವರು ಕೋರಿದ ಜಿಲ್ಲೆಯ ಜನಸಂಖ್ಯೆ ವಿವರಗಳನ್ನು ಸಿದ್ಧಪಡಿಸಿ ವರದಿಯನ್ನು ಜಿಲ್ಲಾಡಳಿತದಿಂದ ನೀಡಲಾಯಿತು. ಇದಕ್ಕೆ ಸಿಎಂ ಸಿದ್ಧರಾಮಯ್ಯ ಅವರು ಪ್ರಭುವಿನೆಡೆಗೆ ಪ್ರಭುತ್ವ ಕಾರ್ಯಕ್ರಮದ ಅನುಷ್ಠಾನ ಉತ್ತಮವಾಗಲಿ, ಜನಸಾಮಾನ್ಯರು ಸರ್ಕಾರಿ ಸೇವೆಗಳಿಗಾಗಿ ವಿನಾಕಾರಣ ಅಲೆದಾಟ ತಪ್ಪಿಸಿ ಶೀಘ್ರ ಸೌಲಭ್ಯ ಹಾಗೂ ಸಮಸ್ಯೆಗಳಿಗೆ ಪರಿಹಾರ ದೊರೆಯಲು ಪ್ರಭುವಿನೆಡೆಗೆ ಪ್ರಭುತ್ವ ಕಾರ್ಯಕ್ರಮ ಪೂರಕವಾಗಲಿ ಎಂದು ಶುಭ ಕೋರಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಅವರು ಜಿಲ್ಲಾ ಪೊಲೀಸ್ ಕಚೇರಿಯಲ್ಲಿ ಪ್ರಭುವಿನೆಡೆಗೆ ಪ್ರಭುತ್ವ ಕಾರ್ಯಕ್ರಮ ಅನುಷ್ಠಾನ ಕುರಿತಂತೆ ವಿವರಿಸುತ್ತಾ, ಮತದಾರ ಪ್ರಭುವಿನ ಮನೆ ಬಾಗಿಲಿಗೆ ಸರ್ಕಾರದ ಸವಲತ್ತುಗಳನ್ನು ತಲುಪಿಸುವ ಕಾರ್ಯ ಇದಾಗಿದೆ. ಈ ಕಾರ್ಯಕ್ರಮವು ಆಡಳಿತ ವ್ಯವಸ್ಥೆಯನ್ನು ಚುರುಕುಗೊಳಿಸಲು ಹಾಗೂ ಸಾರ್ವಜನಿಕರಿಗೆ ತ್ವರಿತವಾಗಿ ಸಮಸ್ಯೆಗಳಿಗೆ ಪರಿಹಾರ ಒದಗಿಸಲು ಜಾರಿ ಮಾಡಲಾಗಿದೆ. ಈ ಕಾರ್ಯಕ್ರಮವನ್ನು ಜಿಲ್ಲೆಯಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಹಾಗೂ ಯಶಸ್ವಿಗೊಳಿಸಲು ಕ್ರಮ ವಹಿಸಲಾಗುತ್ತಿದೆ ಎಂದರು.

ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಅವರ ಮಹತ್ವಾಕಾಂಕ್ಷಿ ಕಾರ್ಯಕ್ರಮ ಇದಾಗಿದೆ. ಈ ಕಾರ್ಯಕ್ರಮಕ್ಕೆ ಅಧಿಕೃತವಾಗಿ ಆಗಸ್ಟ್ 15ರಂದು ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಚಾಲನೆ ನೀಡಲಾಯಿತು. ಈವರೆಗೆ ಒಟ್ಟು 14 ವಿವಿಧ ಅಹವಾಲುಗಳು ಸಾರ್ವಜನಿಕರಿಂದ ಸ್ವೀಕೃತವಾಗಿದ್ದು, ಬಹುತೇಕ ಎಲ್ಲ ▸▸ 3ನೇ ಪುಟಕ್ಕೆ

> ಪ್ರಭುವಿನಡೆಗೆ ಪ್ರಭುತ್ವ ಕಾರ್ಯಕ್ರಮ ಆರಂಭಿಕವಾಗಿ 10 ಅಂಶಗಳನ್ನು ಒಳಗೊಂಡಂತೆ ಸಾರ್ವಜನಿಕರು ದೂರುಗಳನ್ನು ಸಲ್ಲಿಸಲು ಅವಕಾಶ ಒದಗಿಸಲಾಗಿದೆ. ಮಹಿಳಾ ಮತ್ತು ಮಕ್ಕಳ ಸುರಕ್ಷತೆ, ಹಿರಿಯ ನಾಗರಿಕರ ಸಹಾಯ, ತುರ್ತು ವೈದ್ಯಕೀಯ ಸೇವೆ, ಅಕ್ರಮ ಮದ್ಯ ಮಾರಾಟ, ರಸ್ತೆ ಸುರಕ್ಷತೆ ಕ್ರಮ, ಕಾನೂನು ಬಾಹಿರ ಹಾಗೂ ಸಾಮಾಜಿಕ ವಿದ್ರೋಹ ಚಟುವಟಿಕೆ ವಿರುದ್ಧ ಕ್ರಮ, ಜಮೀನು ಹಕ್ಕು ಪತ್ರ , ಪಿಂಚಣಿ ವಿಷಯಗಳಿಗೆ ಸಂಬಂಧಿಸಿದಂತೆ ಮತ್ತು ಪಂಚಾಯತಿಗಳ ಕೆಲ ಸಮಸ್ಯೆಗಳ ಬಗ್ಗೆ ದೂರು ಸಲ್ಲಿಸಬಹುದಾಗಿದೆ ಎಂದು ಎಸ್‌ಪಿ ರೋಹನ್ ಜಗದೀಶ್ ಹೇಳಿದರು.

# 'ಲಕ್ಷ್ಮೇಶ್ವರದ ಸಾಮ್ರಾಟ್' ವಿಸರ್ಜನೆ ನಾಳೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಪಟ್ಟಣದ ಶ್ರೀ ರಾಘವೇಂದ್ರಸ್ವಾಮಿಗಳ ಮಠದ ಬಳಿ ಶ್ರೀ ರಾಘವೇಂದ್ರ ಯುವಕ ಮಂಡಳದ ವತಿಯಿಂದ ಪ್ರತಿಷ್ಠಾಪಿಸಲಾಗಿರುವ ಲಕ್ಷ್ಮೇಶ್ವರದ ಸಾಮ್ರಾಟ್ ಗಣೇಶನ ಮೂರ್ತಿಯ ವಿಸರ್ಜನೆ ಕಾರ್ಯಕ್ರಮ ಸೆ. 22ರಂದು ಮಧ್ಯಾಹ್ನ 2 ಗಂಟೆಯಿಂದ ಬೃಹತ್ ಶೋಭಾಯಾತ್ರೆಯೊಂದಿಗೆ ನಡೆಯಲಿದೆ.

ಸಂಘಟನೆಯು ಕಳೆದ 27 ದಿವಸಗಳಿಂದ ಸಂಪ್ರದಾಯಬದ್ಧವಾಗಿ ಪೂಜೆ ನೆರವೇರಿಸುತ್ತಿದೆ. ಅನೇಕ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ವಿಸರ್ಜನಾ ಮೆರವಣಿಗೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಪಾಲ್ಗೊಳ್ಳಬೇಕು ಎಂದು ಶ್ರೀ ರಾಘವೇಂದ್ರ ಯುವಕ ಸಂಘದ ಪ್ರಕಟಣೆ ವಿನಂತಿಸಿದೆ.

# ಸೆಲ್ಫಿ ಕ್ರೇಜಿಗೆ ಜೀವ ಬಲಿ: 60 ಅಡಿ ಪ್ರಪಾತಕ್ಕೆ ಬಿದ್ದು ಶಿಕ್ಷಕ ಸಾವು

■ವಿಜಯಸಾಕ್ಷಿ ಸುದ್ದಿ, ಚಿಕ್ಕಮಗಳೂರು

ಜಿಲ್ಲೆಯ ಕೆಮ್ಮಣ್ಣುಗುಂಡಿಯ ಬಳಿ ಪತ್ನಿ ಜೊತೆ ಅಪಾಯಕಾರಿ ಸ್ಥಳದಲ್ಲಿ ಸೆಲ್ಫಿ ತೆಗೆದುಕೊಳ್ಳಲು ಹೋಗಿ 60 ಅಡಿ ಆಳದ ಪ್ರಪಾತಕ್ಕೆ ಬಿದ್ದು ಶಿಕ್ಷಕ ಸಾವನ್ನಪ್ಪಿದ ದುರ್ಘಟನೆ ಸಂಭವಿಸಿದೆ.

40 ವರ್ಷದ ಸಂತೋಷ್ ಮೃತ ಶಿಕ್ಷಕ. ತರೀಕೆ-ರೆ ತಾಲೂಕಿನ ಕೆಮ್ಮಣ್ಣುಗುಂಡಿಗೆ ಪತ್ನಿ ಜೊತೆ ಸಂತೋಷ್ ಬಂದಿದ್ದರು. ಈ ವೇಳೆ ರಸ್ತೆ ಬದಿ ಪತ್ನಿಯೊಂದಿಗೆ ಸೆಲ್ಫಿ ತೆಗೆದುಕೊಳ್ಳುವಾಗ ಆಯತಪ್ಪಿ ಪ್ರಪಾತಕ್ಕೆ ಬಿದ್ದಿದ್ದಾರೆ. ಬಿದ್ದ ರಭಸಕ್ಕೆ ಅವರ ತಲೆಗೆ ಬಲವಾದ ಗಾಯವಾಗಿ, ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ.

ಸಂತೋಷ್ ಅವರು ತರೀಕೆರೆ ತಾಲೂಕಿನ ಲಕ್ಷೀಸಾಗರ ಶಾಲೆಯಲ್ಲಿ ಶಿಕ್ಷಕರಾಗಿ ಕೆಲಸ ಮಾಡುತ್ತಿದ್ದರು. ಅಗ್ನಿಶಾಮಕದಳದ ಸಿಬ್ಬಂದಿ ಪ್ರಪಾತದಿಂದ ಮೃತದೇಹವನ್ನು ತೆಗೆದಿದ್ದಾರೆ. ಲಿಂಗದಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ.

## ಸಂಭ್ರಮದಿಂದ ಆಚರಿಸುವ ನವರಾತ್ರಿ-ದಸರಾ ಹಬ್ಬದ ಮಹತ್ವದ ಕುರಿತು ಲೇಖನ

# ಶಕ್ತಿ ಮಾತೆಯ ಆರಾಧನೆಯ ಹಬ್ಬ



ನವರಾತ್ರಿ ಹಬ್ಬವು ಹಿಂದೂ ಸಂಸ್ಕೃತಿಯಲ್ಲಿ ತನ್ನದೇ ಆದ ವೈಶಿಷ್ಟ್ಯತೆಯನ್ನು ಪಡೆದಿದೆ. ಅಶ್ವಯುಜ ಮಾಸದ ಶರನ್ನವರಾತ್ರಿ ಎಂದೇ ಪ್ರಸಿದ್ಧವಾಗಿದೆ. ನವರಾತ್ರಿ ಎಂದರೆ ಒಂಬತ್ತು ರಾತ್ರಿಗಳು. ದುರ್ಗಾದೇವಿಯು ಒಂಬತ್ತು ದಿನಗಳ ಕಾಲ ಮಹಿಷಾಸುರನೊಂದಿಗೆ ಯುದ್ಧಮಾಡಿ ವಿಜಯ ಸಾಧಿಸುತ್ತಾಳೆ.

ನವರಾತ್ರಿ ನವದುರ್ಗೆಯರನ್ನು ಪೂಜಿಸುವ ಹಬ್ಬವಾಗಿದೆ. ದುಷ್ಟರನ್ನು ಶಿಕ್ಷಿಸಲು, ಶಿಷ್ಟರನ್ನು ರಕ್ಷಿಸಲು ಶಕ್ತಿ ಸ್ವರೂಪಿಣಿಯಾದ ದುರ್ಗಾ ದೇವಿಯು ಒಂಬತ್ತು ಅವತಾರಗಳನ್ನು ತಾಳುತ್ತಾಳೆ. ಪುರಾಣಗಳಲ್ಲಿ ಉಲ್ಲೇಖಿಸಿದಂತೆ ಮಹಿಷಾಸುರನೆಂಬ ಅಸುರನು ತನ್ನ ಸೈನ್ಯದೊಂದಿಗೆ ದೇವಲೋಕಕ್ಕೆ ದಾಳಿ ಮಾಡಿ, ದೇವತೆಗಳನ್ನು ಪೀಡಿಸುತ್ತಿದ್ದನು. ಆಗ ದೇವತೆಗಳೆಲ್ಲರೂ ತ್ರಿಮೂರ್ತಿಗಳಾದ ಬ್ರಹ್ಮ, ವಿಷ್ಣು ಮಹೇಶ್ವರನನ್ನು ಕಾಪಾಡುವಂತೆ ಕೇಳಿಕೊಂಡಾಗ ತ್ರಿಮೂರ್ತಿಗಳು ತಮ್ಮ ದೇಹದ ಶಕ್ತಿಯನ್ನು ಸೇರಿಸಿ ದೇವತೆಯನ್ನು ಸೃಷ್ಟಿಸಿದರು. ಎಲ್ಲ ದೇವರ ಶಕ್ತಿಯು ಸೇರಿ ದುರ್ಗಾ ದೇವಿಯು ಅವತಾರವೆತ್ತಿದಳು.

ದುಷ್ಟರ ಸಂಹಾರಕ್ಕಾಗಿ ಶಿಷ್ಟರ ರಕ್ಷಣೆಗಾಗಿ ನವ (ಒಂಬತ್ತು) ಅವತಾರಗಳನ್ನು ಎತ್ತಿ, ಅಸುರರನ್ನು ಸಂಹರಿಸಿದ ಶಕ್ತಿ ಸ್ವರೂಪಿಣಿಯೇ ದುರ್ಗಾ ದೇವಿ. ನವರಾತ್ರಿಯ ಒಂಬತ್ತು ದಿನಗಳಲ್ಲಿ ನವದುರ್ಗೆಯರನ್ನು ಶೈಲಪುತ್ರಿ, ಬ್ರಹ್ಮಚಾರಿಣಿ, ಚಂದ್ರಘಂಟಾ ದೇವಿ, ಕೂಷ್ಮಾಂಡ ದೇವಿ, ಸ್ಕಂದ ಮಾತೆ, ಕಾತ್ಯಾಯನಿ, ಕಾಳರಾತ್ರಿ, ಮಹಾಗೌರಿ, ಸಿದ್ಧಿದಾತ್ರಿ ಹೀಗೆ ಒಂಬತ್ತು ದಿವಸಗಳಲ್ಲಿ ಪೂಜಿಸಲಾಗುವುದು.

ಶಕ್ತಿಗಳ ಸಂಗಮದಿಂದ ಆದ ದುರ್ಗಾದೇವಿಗೆ ದೇವತೆಗಳೆಲ್ಲ ಆಯುಧಗಳನ್ನು ನೀಡಿದರು. ಎಲ್ಲ ಆಯುಧಗಳಿಂದ ಸನ್ನದ್ಧವಾದ ದೇವಿಯು ಯುದ್ಧಕ್ಕೆ ಸಿದ್ಧಳಾಗಿ ಅಸುರ ಸೈನ್ಯದ ಮೇಲೆ ಆಕ್ರಮಣ ಮಾಡಿದಳು. ಒಂಬತ್ತು ದಿನಗಳ ಕಾಲ ಯುದ್ಧಮಾಡಿ ಮಹಿಷಾಸುರನನ್ನು ಸಂಹರಿಸಿದಳು. ದುರ್ಗೆಯು ಮಹಿಷಾಸುರನನ್ನು ವಧಿಸಿದ ದಿನವೇ ವಿಜಯ ದಶಮಿಯಾಗಿದೆ. ಶ್ರೀ ರಾಮದೇವರು ರಾವಣನನ್ನು ಸಂಹಾರ ಮಾಡಿದ ದಿನವೂ ವಿಜಯದಶಮಿಯಾಗಿದೆ. ಪಾಂಡವರು ಒಂದು ವರ್ಷ ಅಜ್ಞಾತವಾಸದಲ್ಲಿದ್ದಾಗ ತಮ್ಮ ಆಯುಧಗಳನ್ನು ಶಮಿ ವೃಕ್ಷ (ಬನ್ನಿ ಮರದ)ದಲ್ಲಿ ಮುಚ್ಚಿಟ್ಟಿದ್ದರು. ದಶಮಿಯ ದಿನಕ್ಕೆ ಅಜ್ಞಾತವಾಸ ಮುಗಿದು, ಅವರು ಬನ್ನಿ ಮರದಿಂದ ಆಯುಧಗಳನ್ನು ವಾಪಸ್ಸು ಪಡೆದು ಕುರುಕ್ಷೇತ್ರದಲ್ಲಿ ಕೌರವರೊಂದಿಗೆ ಯುದ್ಧ ಮಾಡಿ ವಿಜಯ ಸಾಧಿಸಿದ ದಿನವಾಗಿದೆ. ಹೀಗಾಗಿ ದಸರಾ ಹಬ್ಬವು ಸತ್ಯ, ಧರ್ಮ, ಶಕ್ತಿಯ ಆರಾಧನೆಯ ಸಂಕೇತವಾಗಿದೆ.

ದಸರಾ (ವಿಜಯದಶಮಿ) ಹಬ್ಬವು ಹಿಂದೂ ಸಂಸ್ಕೃತಿಯಲ್ಲಿ ತನ್ನದೇ ಆದ ಮಹತ್ವ ಪಡೆದ ಹಬ್ಬವಾಗಿದೆ. ಅಶ್ವಯುಜ ಮಾಸದ ದಶಮಿಯಂದು ದಸರಾ ಹಬ್ಬವನ್ನು ಆಚರಿಸುತ್ತಾರೆ. ಇದು ಅಧರ್ಮದ ಮೇಲೆ ಧರ್ಮದ ಜಯ, ದುಷ್ಟರ ಮೇಲೆ ಶಿಷ್ಟರ ಜಯ ಇವುಗಳ ಪ್ರತೀಕವಾಗಿದೆ.

ಲಲಿತಾ ಪಂಚಮಿಯು ನವರಾತ್ರಿಯ 5ನೇ ದಿನ ನಡೆಯುವ ಪೂಜೆಯಾಗಿದೆ. ಲಲಿತಾ ಸಹಸ್ರ ನಾಮ ಪಠನೆ, ಲಲಿತಾ ಅಷ್ಟೋತ್ತರ ಶತನಾಮಗಳನ್ನು ಭಕ್ತರು ಪಠಿಸುತ್ತಾ ಲಲಿತಾ ದೇವಿಯ ಪೂಜೆ ಮಾಡುತ್ತಾರೆ.

ಮಹಾನವಮಿಯು ನವರಾತ್ರಿಯ 9ನೇ ದಿವಸವಾಗಿದೆ. ಇದು ಅತ್ಯಂತ ಮಹತ್ವದ ದಿನಗಳಲ್ಲಿ ಒಂದು. ಈ ದಿನ ಶಕ್ತಿ, ಜ್ಞಾನ, ವಿಜಯದ ಸಂಕೇತವಾಗಿದೆ. ಅಂದು ಆಯುಧ ಪೂಜೆ ಮತ್ತು ಸರಸ್ವತಿ ದೇವಿಯ ಪೂಜೆಯನ್ನು ಮಾಡುತ್ತಾರೆ. ಮನೆಗಳಲ್ಲಿ ಮತ್ತು ದೇವಸ್ಥಾನಗಳಲ್ಲಿ ದೇವಿ ದುರ್ಗೆಯನ್ನು ಅಲಂಕರಿಸಿ ಪೂಜೆ ಮಾಡುತ್ತಾರೆ. ಈ ದಿವಸ ಪುಸ್ತಕಗಳು, ಸಂಗೀತ ವಾದ್ಯಗಳು, ಆಯುಧಗಳು, ಕೆಲಸಕ್ಕಾಗಿ ಬಳಸುವ ಸಾಧನಗಳನ್ನು ದೇವಿಗೆ ಸಮರ್ಪಿಸಿ ಪೂಜೆ ಮಾಡುತ್ತಾರೆ. ಪೂಜೆ ಮಾಡಿದ ಸಾಧನಗಳನ್ನು ದೇವಿಯ ಆಶೀರ್ವಾದಕ್ಕಾಗಿ ಅರ್ಪಣೆ ಮಾಡುತ್ತಾರೆ. ವಿಜಯದಶಮಿ ದಿನ ಅವುಗಳನ್ನು ಮರಳಿ ಉಪಯೋಗಿಸಲು ಪ್ರಾರಂಭಿಸುತ್ತಾರೆ.

ಬನ್ನಿ ಹಬ್ಬವನ್ನು ವಿಜಯದಶಮಿ (ದಸರಾ) ಹಬ್ಬವೆಂದು ಆಚರಿಸಲಾಗುತ್ತದೆ. ಬನ್ನಿ ಮರವನ್ನು ಪೂಜಿಸಿ ಅದರ ಎಲೆಗಳನ್ನು ಸುವರ್ಣವೆಂದು ಪರಿಗಣಿಸಿ ವಿಜಯ ದಶಮಿಯ ದಿನದಂದು ಪರಸ್ಪರ ವಿನಿಮಯ ಮಾಡಿಕೊಳ್ಳುತ್ತಾರೆ.

ಶ್ರೀಕ್ಷೇತ್ರ ತಿರುಪತಿಯಲ್ಲಿ ನವರಾತ್ರಿಯ ಉತ್ಸವವನ್ನು ಬಹಳ ವೈಭವದಿಂದ ಆಚರಿಸಲಾಗುತ್ತದೆ. ನವರಾತ್ರಿಯಲ್ಲಿ ಪ್ರತಿ ದಿವಸವೂ ವೆಂಕಟೇಶ್ವರ ಸ್ವಾಮಿಗೆ ವಿಭಿನ್ನ ಅಲಂಕಾರ ಮಾಡಲಾಗುತ್ತದೆ. ಉತ್ಸವ ಮೂರ್ತಿಯನ್ನು ಬಂಗಾರದ ರಥ, ಹಂಸ ವಾಹನ, ಸಿಂಹ ವಾಹನ ಹೀಗೆ ವಿವಿಧ ವಾಹನಗಳಲ್ಲಿ ಮೆರವಣಿಗೆ ಮಾಡಲಾಗುತ್ತದೆ. ಈ ಸಮಯದಲ್ಲಿ ವೇದ ಪಾರಾಯಣ, ಸಂಗೀತ ಕಾರ್ಯಕ್ರಮಗಳು, ಹರಿಕಥೆಗಳು ಮುಂತಾದ ಧಾರ್ಮಿಕ ಕಾರ್ಯಕ್ರಮಗಳೂ ಸಹ ನಡೆಯುತ್ತವೆ. ತಿರುಪತಿಯಲ್ಲಿ ನವರಾತ್ರಿ ಉತ್ಸವವು ಭಕ್ತರಿಗೆ ಭಕ್ತಿ, ಸಂಸ್ಕೃತಿ ಮತ್ತು ವೈಭವವದ ಸಂಕೇತವಾಗಿದೆ.

ಮೈಸೂರಿನ ಚಾಮುಂಡಿ ಬೆಟ್ಟದಲ್ಲಿ ಚಾಮುಂಡೇಶ್ವರಿ ದೇವಿಯ ಪೂಜೆ ವಿಜೃಂಭಣೆಯಿಂದ ಜರುಗುತ್ತದೆ. ದಸರಾ ಹಬ್ಬದಲ್ಲಿ ಮೈಸೂರು ಅರಮನೆಯನ್ನು ವಿವಿಧ ರೀತಿಯ ದೀಪಗಳಿಂದ ಅಲಂಕರಿಸುತ್ತಾರೆ. ದಸರಾ ಹಬ್ಬದ ನಿಮಿತ್ತ ವಿವಿಧ ಪ್ರದರ್ಶನಗಳು, ಸಾಂಸ್ಕೃತಿಕ ಕಾರ್ಯಕ್ರಮಗಳು, ಜರುಗುತ್ತವೆ. ಅಂಬಾರಿ ಆನೆ ಮೇಲೆ ತಾಯಿ ಚಾಮುಂಡೇಶ್ವರಿ ದೇವಿಯ ಮೂರ್ತಿಯ (ಪ್ರತಿಮೆಯ) ಮೆರವಣಿಗೆ ದಸರಾ ಜಂಬೂ ಸವಾರಿ ಅಂಬಾರಿಯ ಮೆರವಣಿಗೆಯು ಅತ್ಯಂತ ಮಹತ್ವ ಪಡೆದಿದೆ.

ಐತಿಹಾಸಿಕ, ಧಾರ್ಮಿಕ, ಸಾಂಸ್ಕೃತಿಕ, ಶಿಲ್ಪಕಲೆಯ ಬೀಡಾಗಿರುವ ಗದುಗಿನಲ್ಲಿ ವೀರನಾರಾಯಣ ದೇವಸ್ಥಾನದಲ್ಲಿ ವೀರನಾರಾಯಣನಿಗೆ ನವರಾತ್ರಿ ಹಬ್ಬದಂದು ವಿವಿಧ ರೀತಿಯ ಅಲಂಕಾರಗಳೊಂದಿಗೆ ಪೂಜೆ, ರಥೋತ್ಸವ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ನಡೆಸಲಾಗುತ್ತದೆ. ದಸರಾ ದಿನದಂದು ಉತ್ಸವ ಮೂರ್ತಿ ಭವ್ಯ ಮೆರವಣಿಗೆಯು ಸಹ ಜರುಗುತ್ತದೆ. ಅದೇ ರೀತಿ ನವರಾತ್ರಿ ಹಾಗೂ ದಸರಾ ದಿನದಂದು ಗದಗನಲ್ಲಿ ಶಕ್ತಿ ದೇವತೆಯಾದ ದುರ್ಗಾ ದೇವಿಯ ದೇವಸ್ಥಾನಗಳಲ್ಲಿ ವಿವಿಧ ರೀತಿಯ ಅಲಂಕಾರಗಳೊಂದಿಗೆ ಶ್ರದ್ಧಾ ಭಕ್ತಿಯಿಂದ ಭಕ್ತಾದಿಗಳು ಪೂಜೆ ಸಲ್ಲಿಸುತ್ತಾರೆ.

ನವರಾತ್ರಿ ಸಮಯದಲ್ಲಿ ವಿವಿಧ ಧಾರ್ಮಿಕ ಸ್ಥಳಗಳಲ್ಲಿ ಹಾಗೂ ಮನೆ ಮನೆಗಳಲ್ಲಿ ದುರ್ಗಾ ದೇವಿ ಹಾಗೂ ವೆಂಕಟೇಶ್ವರ ದೇವರ ಪೂಜೆಯನ್ನು ಕೈಗೊಳ್ಳುತ್ತಾರೆ. ದೇವಿಯ ಪುರಾಣ ಹಾಗೂ ವೆಂಕಟೇಶ್ವರ ಮಹಾತ್ಮೆಯನ್ನು ಪಠಣ ಹಾಗೂ ಶ್ರವಣ ಮಾಡುತ್ತಾರೆ. ಮನೆಗಳನ್ನು ತಳಿರು ತೋರಣಗಳಿಂದ ಶೃಂಗರಿಸುತ್ತಾರೆ. ಭಕ್ತಿ ಹಾಗೂ ಧಾರ್ಮಿಕತೆಗೆ ಪ್ರತೀಕವಾಗಿರುವ ನವರಾತ್ರಿ ಹಾಗೂ ದಸರಾ ಹಬ್ಬಗಳನ್ನು ಶಾಂತಿ ಮತ್ತು ಸಂಭ್ರಮದಿಂದ ಆಚರಿಸೋಣ. ಭಗವಂತನ ಅನುಗ್ರಹ ಪಡೆದು ಪಾವನರಾಗೋಣ.

**– ಅಂಜನಾ ರಾಘವೇಂದ್ರ ಕುಬೇರ.**
ಗದಗ.

## ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ನಂ.11ಕ್ಕೆ ಕಂಪ್ಯೂಟರ್ ಕೊಡುಗೆ

# ಮಕ್ಕಳು ವೈಚಾರಿಕ ಮನೋಭಾವ ಹೊಂದಲಿ



ಲಯನ್ಸ್ ಕ್ಲಬ್‌ನ ನಿಕಟಪೂರ್ವ ಜಿಲ್ಲಾ ಗವರ್ನರ್ ಸುಗ್ಗಲಾ ಯಳಮಲಿ ಮಾತನಾಡಿ, ಮಕ್ಕಳ ಶೈಕ್ಷಣಿಕ ಅಭಿವೃದ್ಧಿಯಲ್ಲಿ ವಿಜ್ಞಾನದ ಅವಿಷ್ಕಾರಗಳನ್ನು, ಹೊಸ-ಹೊಸ ಸಂಶೋಧನಾ ಭಾವಗಳನ್ನು ತುಂಬುವ ಅಗತ್ಯತೆ ಇದ್ದು, ತಾಂತ್ರಿಕತೆಯ ಮೂಲಕ ಮಕ್ಕಳು ಶೈಕ್ಷಣಿಕ ವಿಷಯಗಳನ್ನು ಕುತೂಹಲಕಾರಿ ಹಾಗೂ ಸಮಸ್ಯೆಗಳಿಗೆ ಕಂಪ್ಯೂಟರ್-ಇಂಟರ್‌ನೆಟ್ ಮೂಲಕ ಉತ್ತರಗಳನ್ನು ಕಂಡುಕೊಳ್ಳಬಹುದು ಎಂದರು.

■ವಿಜಯಸಾಕ್ಷಿ ಸುದ್ದಿ, ಗದಗ

ಮಕ್ಕಳ ಮನಸ್ಸುಗಳಲ್ಲಿ ಮಾಹಿತಿಗಳನ್ನು ತುಂಬುವುದು ಮಾತ್ರ ಶಿಕ್ಷಣದ ಗುರಿಯಲ್ಲ. ಸಮಗ್ರ, ದೈಹಿಕ ಹಾಗೂ ಮಾನಸಿಕ ಬೆಳವಣಿಗೆಯೇ ಶಿಕ್ಷಣದ ಉದ್ದೇಶವಾಗಿದ್ದು, ಮಕ್ಕಳು ವೈಜ್ಞಾನಿಕ ಹಾಗೂ ವೈಚಾರಿಕ ಭಾವನೆಗಳೊಂದಿಗೆ ಶೈಕ್ಷಣಿಕ ಅಭಿವೃದ್ಧಿ ಕಾಣಬೇಕು ಎಂದು ಗದಗ ಜಯೇಂಟ್ಸ್ ಗ್ರುಪ್ ಆಫ್ ಸಖಿ-ಸಹೇಲಿಯ ಅಧ್ಯಕ್ಷೆ ಸುಮಾ ಪಾಟೀಲ ಹೇಳಿದರು.

ಅವರು ಗದಗ ಜಯೇಂಟ್ಸ್ ಗ್ರುಪ್ ಆಫ್ ಸಖಿ-ಸಹೇಲಿ ಸಪ್ತಾಹದ 4ನೇ ಕಾರ್ಯಕ್ರಮವಾಗಿ ಗದುಗಿನ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ನಂ.11ರಲ್ಲಿ ಲಯನ್ಸ್ ಕ್ಲಬ್ ಸಹಯೋಗದೊಂದಿಗೆ ಶಾಲೆಗೆ ಕಂಪ್ಯೂಟರ್ ವಿತರಿಸಿ ಮಾತನಾಡಿದರು.

ಮಕ್ಕಳಿಗೆ ಇಂದಿನ ದಿನಗಳಲ್ಲಿ ಕಂಪ್ಯೂಟರ್ ಜ್ಞಾನ ಅತೀ ಅವಶ್ಯವಾಗಿದೆ. ಸರ್ಕಾರಿ ಶಾಲೆಯ ಮಕ್ಕಳಿಗೆ ತಾಂತ್ರಿಕ ಹಾಗೂ ವೈಜ್ಞಾನಿಕ ಮನೋಭಾವನೆ ಕುರಿತಾಗಿ ತಿಳುವಳಿಕೆ ಅವಶ್ಯವಾಗಿದ್ದು, ಮುಂದೆ ವೈಜ್ಞಾನಿಕತೆಯೊಂದಿಗೆ ಬೆಳೆಯಬೇಕು. ಆ ಉದ್ದೇಶದಿಂದ ಕಲಿಕೆಯಲ್ಲಿ ನಾವೀನ್ಯತೆ ಮೂಡಲಿ ಎಂದು ಕಂಪ್ಯೂಟರ್ ವಿತರಿಸಲಾಗಿದೆ ಎಂದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಶಾಲಾ ಎಸ್.ಡಿ.ಎಂ.ಸಿ ಅಧ್ಯಕ್ಷ ಎಂ.ಆರ್. ಕರಮಡಿ ಮಾತನಾಡಿ, ಸರ್ಕಾರಿ ಶಾಲೆಗಳು ಮಕ್ಕಳಲ್ಲಿ ಆತ್ಮವಿಶ್ವಾಸವನ್ನು ಮೂಡಿಸುತ್ತವೆ. ಬಡ ಕುಟುಂಬದ ಮಕ್ಕಳಾಗಿರುವುದರಿಂದ ಅವರಿಗೂ ತಾಂತ್ರಿಕತೆಯ ತಿಳುವಳಿಕೆ ಬೇಕು. ಸರ್ಕಾರ ನೀಡುವ ಉಚಿತ ಯೋಜನೆಗಳು ಮಕ್ಕಳಿಗೆ ತಲುಪಿದ್ದು, ಅವಶ್ಯಕತೆ ಇರುವ ವಸ್ತುಗಳನ್ನು ಸಂಘ-ಸಂಸ್ಥೆಗಳು ಶಾಲೆಗೆ ಬಂದು ಕೊಡುಗೆಯಾಗಿ ನೀಡುತ್ತಿರುವುದು ಹೆಮ್ಮೆಯ ವಿಷಯ ಎಂದರು.

ಪ್ರಾಸ್ತಾವಿಕವಾಗಿ ಸಂಪನ್ಮೂಲ ವ್ಯಕ್ತಿ ಕವಿತಾ ಬೇಲೇರಿ ಮಾತನಾಡಿ, ಸರ್ಕಾರಿ ಶಾಲೆಗಳಿಗೆ ದಾನಿಗಳು ಬೆನ್ನೆಲುಬಾಗಿದ್ದಾರೆ. ದಾನಿಗಳು ನೀಡುವ ಕೊಡುಗೆಗಳು ಮಕ್ಕಳಿಗೆ ತಲುಪಿ ಸದ್ವಿನಿಯೋಗವಾಗಲಿ. ಕಂಪ್ಯೂಟರ್ ಜ್ಞಾನವು ಬಾಲ್ಯದಲ್ಲಿಯೇ ಮಕ್ಕಳಿಗೆ ರೂಢಿಯಾಗುವುದರಿಂದ ಮುಂದೆ ಉಪಯೋಗ ಆಗುತ್ತದೆ. ಇವರಂತಯೇ ದಾನಿಗಳು ಸರ್ಕಾರಿ ಶಾಲೆಗೆ ಆಗಮಿಸಿ ಕೊಡುಗೆಗಳನ್ನು ನೀಡುವಂತೆ ಮನವಿ ಮಾಡಿದರು.

ಶಾಲಾ ಮುಖ್ಯೋಪಾಧ್ಯಾಯೆ ಭಾರತಿ ಕುಲಕರ್ಣಿ ಸ್ವಾಗತಿಸಿ ಮಾತನಾಡಿ, ಸರ್ಕಾರಿ ಶಾಲೆಗಳಿಗೆ ದಾನಿಗಳ ಅವಶ್ಯಕತೆ ಇದೆ. ಇಲ್ಲಿಯ ಮಕ್ಕಳು ಪ್ರತಿಭಾನ್ವಿತರಾಗಿದ್ದು, ಎಲ್ಲ ಮಕ್ಕಳಿಗೆ ತಾಂತ್ರಿಕ ಶಿಕ್ಷಣದ ಹಾಗೂ ವೈಜ್ಞಾನಿಕತೆಯ ಅರಿವು ಮೂಡಿಸುವ ಕಾರ್ಯ ನಡೆಯುತ್ತಿದೆ ಎಂದರು.

ಶಾಲಾ ಶಿಕ್ಷಕಿ ಆರ್.ಎಫ್. ಹೊಸಮನಿ ಪರಿಚಯಿಸಿದರು. ಮಂಜುಳಾ ಕೊಳ್ಳಿ ನಿರೂಪಿಸಿದರು. ಸಂಘಟನಾ ಕಾರ್ಯದರ್ಶಿ ಅಶ್ವಿನಿ ಮಾದಗುಂಡಿ ಪರಿಚಯಿಸಿದರು. ಶಶಿಕಲಾ ಮಾಲಿಪಾಟೀಲ ವಂದಿಸಿದರು. ರೇಖಾ ರೊಟ್ಟಿ, ಶಾಂತಾ ತುಪ್ಪದ, ಶ್ರೀದೇವಿ ಮಹೇಂದ್ರಕರ್, ಸುಷ್ಮಿತಾ ವೇರ್ಣೆಕರ, ಮಾಧುರಿ ಮಾಳೆಕೊಪ್ಪ, ನಿರ್ಮಲಾ ಪಾಟೀಲ, ಚಂದ್ರಕಲಾ ಸ್ಥಾವರಮಠ, ಅನುರಾಧಾ ಅಮಾತ್ಯೆಗೌಡರ, ಮಧು ಕರಿಬಿಷ್ಠಿ, ವಿದ್ಯಾ ಶಿವನಗುತ್ತಿ ಮುಂತಾದವರು ಉಪಸ್ಥಿತರಿದ್ದರು.

# ಬ್ರಾಂಡೆಡ್ ಫ್ಯಾಕ್ಟರಿ ಅಂಗಡಿಗೆ ಬೆಂಕಿ; ಲಕ್ಷಾಂತರ ಮೌಲ್ಯದ ಬಟ್ಟೆಗಳು ಬೆಂಕಿಗಾಹುತಿ!

■ವಿಜಯಸಾಕ್ಷಿ ಸುದ್ದಿ, ಕೋಲಾರ

ಕೋಲಾರದ ಎಂ.ಜಿ. ರಸ್ತೆಯಲ್ಲಿರುವ ಬ್ರಾಂಡೆಡ್ ಫ್ಯಾಕ್ಟರಿ ಅಂಗಡಿಗೆ ಬೆಂಕಿ ಬಿದ್ದು ಅಂಗಡಿಯಲ್ಲಿದ್ದ ಲಕ್ಷಾಂತರ ರೂ. ಮೌಲ್ಯದ ಬಟ್ಟೆಗಳು ಸುಟ್ಟು ಭಸ್ಮವಾಗಿದೆ. ಬಟ್ಟೆ ವ್ಯಾಪಾರಿ ಹಾಗೂ ಮಾಲೀಕ ಇಕ್ರಂ ಪಾಷಾ ಎಂಬವರಿಗೆ ಸೇರಿದ ಅಂಗಡಿಯಲ್ಲಿ ಶಾರ್ಟ್ ಸರ್ಕ್ಯೂಟ್‌ನಿಂದ ಬೆಂಕಿ ಹೊತ್ತಿರುವ ಶಂಕೆ ವ್ಯಕ್ತವಾಗಿದೆ. ಘಟನೆಯಲ್ಲಿ 20ರಿಂದ 25 ಲಕ್ಷ ರೂ. ಮೌಲ್ಯದ ಬಟ್ಟೆಗಳು ಹಾಗೂ ಕೆಲ ವಸ್ತುಗಳು ಬೆಂಕಿಯ ಕೆನ್ನಾಲಿಗೆಗೆ ಸುಟ್ಟು ಕರಕಲಾಗಿದೆ. ಇನ್ನು ವಿಷಯ ತಿಳಿಯುತ್ತಿದ್ದಂತೆ ಸ್ಥಳಕ್ಕೆ ಅಗ್ನಿಶಾಮಕ ಸಿಬ್ಬಂದಿ ಆಗಮಿಸಿ ಬೆಂಕಿ ನಂದಿಸುವ ಕಾರ್ಯದಲ್ಲಿ ಯಶಸ್ವಿಯಾಗಿದ್ದಾರೆ.

# ಪ್ಯಾರಾ ಲೀಗಲ್ ವಾಲಂಟಿಯರ್ಸ್ ಆಯ್ಕೆಗಾಗಿ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ


ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ನವದೆಹಲಿ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು ಇವರ ನಿರ್ದೇಶನದಂತೆ ಅರೆಕಾಲಿಕ ಸ್ವಯಂ ಸೇವಕರುಗಳನ್ನು (ಪ್ಯಾರಾ ಲೀಗಲ್ ವಾಲಂಟಿಯರ್ಸ್) ಗದಗ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಕ್ಕೆ ಹಾಗೂ ರೋಣ, ಲಕ್ಷ್ಮೇಶ್ವರ, ಮುಂಡರಗಿ ಹಾಗೂ ನರಗುಂದ ತಾಲೂಕಾ ಕಾನೂನು ಸೇವಾ ಸಮಿತಿಗಳಿಗೆ ಆಯ್ಕೆ ಮಾಡಲು ನಿರ್ದೇಶನ ನೀಡಿರುತ್ತಾರೆ.

ಸ್ವಪ್ರೇರಿತ ಕಾನೂನು ಸಹಾಯಕರು ಯಾವುದೇ ಶುಲ್ಕ, ಸಂಭಾವನೆ ಅಥವಾ ಸಂಬಳವನ್ನು ನಿರೀಕ್ಷಿಸದೆ ತಮ್ಮ ಸುತ್ತ ಮುತ್ತಲಿನ ಪ್ರದೇಶದಲ್ಲಿರುವ ಶೋಷಿತ ಹಾಗೂ ತುಳಿತಕ್ಕೊಳಗಾದ ಜನರ ಸೇವೆಗಳನ್ನು ಮಾಡಲು ಅರ್ಪಣಾ ಮನೋಭಾವದಿಂದ ಕಾರ್ಯನಿರ್ವಹಿಸಲು ಇಚ್ಛಿಸುವ ಕಾನೂನು ವಿದ್ಯಾರ್ಥಿಗಳು, ವೈದ್ಯಕೀಯ ಕ್ಷೇತ್ರದಲ್ಲಿ ಕೆಲಸ ಮಾಡುತ್ತಿರುವ ವ್ಯಕ್ತಿಗಳು, ಉನ್ನತ ಶಿಕ್ಷಣ ಪಡೆಯುತ್ತಿರುವ ವಿದ್ಯಾರ್ಥಿಗಳು, ಎಮ್.ಎಸ್.ಡಬ್ಲ್ಯೂ ವಿದ್ಯಾರ್ಥಿಗಳು ಮತ್ತು ಶಿಕ್ಷಕರು, ಕಾನೂನು ವಿದ್ಯಾಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ನಿವೃತ್ತ ಸರ್ಕಾರಿ ನೌಕರರು, ಮಾಜಿ ಸೈನಿಕರು ಹಾಗೂ ಅವರ ಕುಟುಂಬದ ಸದಸ್ಯರು, ವಿವಿಧ ಸಂಘಟನೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಾಮಾಜಿಕ ಸೇವಾ ಮನೋಭಾವ ಹೊಂದಿರುವ ಪುರುಷ ಮತ್ತು ಮಹಿಳೆಯರು, ಮಂಗಳಮುಖಿಯರು, ಸನ್ನಡತೆ ಹೊಂದಿದ ಕಾರಾಗೃಹ ಬಂಧಿಗಳು, ಸ್ವ-ಸಹಾಯ ಸಂಘಗಳ ಸದಸ್ಯರು, ಸಾಮಾಜಿಕ ಕಾರ್ಯಕರ್ತರು ಸೇವೆ ಸಲ್ಲಿಸಲು ಆಸಕ್ತಿ ಇರುವವರು ಅರ್ಜಿ ಸಲ್ಲಿಸಬಹುದು.

ಗದಗ ತಾಲೂಕಿನಲ್ಲಿ ಸೇವೆ ಸಲ್ಲಿಸಲು ಆಸಕ್ತರಿರುವ ಅಭ್ಯರ್ಥಿಗಳು ಗದಗ ಜಿಲ್ಲಾ ನ್ಯಾಯಾಲಯದ ಆವರಣದಲ್ಲಿರುವ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಗದಗ ಕಚೇರಿಗೆ ಹಾಗೂ ಆಯಾ ತಾಲೂಕಿನ ಅಭ್ಯರ್ಥಿಗಳು ಮೇಲ್ಕಂಡ ತಾಲೂಕಿನ ನ್ಯಾಯಾಲಯದ ಆವರಣದಲ್ಲಿರುವ ತಾಲೂಕಾ ಕಾನೂನು ಸೇವಾ ಸಮಿತಿಗಳಲ್ಲಿರುವ ನಿಗದಿತ ಅರ್ಜಿ ನಮೂನೆಯನ್ನು ಪಡೆದು ಭರ್ತಿ ಮಾಡಿದ ಅರ್ಜಿಗಳನ್ನು ಸೆ.30ರ ಒಳಗಾಗಿ ಖುದ್ದಾಗಿ ಸಲ್ಲಿಸಬೇಕೆಂದು ಹಾಗೂ ಅಗತ್ಯಬಿದ್ದರೆ ಸಂದರ್ಶನದ ದಿನಾಂಕ ಹಾಗೂ ಸಮಯವನ್ನು ನಂತರ ತಿಳಿಸಲಾಗುವುದು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಿದ್ದೇಶ್ವರ ಬೆಟ್ಟದಲ್ಲಿ ನವರಾತ್ರಿ ಉತ್ಸವ

■ವಿಜಯಸಾಕ್ಷಿ ಸುದ್ದಿ, ನರಗುಂದ



ನರಗುಂದ ಪಟ್ಟಣದ ಸಿದ್ದೇಶ್ವರ ಬೆಟ್ಟದಲ್ಲಿರುವ ಪರಮಪೂಜ್ಯ ಮಾತೋಶ್ರೀ ಕಲ್ಯಾಣಮ್ಮನವರ ಸದ್ಭಕ್ತರ ಸದಿಚ್ಛೆಯಂತೆ ಈ ವರ್ಷದ ನವರಾತ್ರಿ ಉತ್ಸವವನ್ನು ವಿಜೃಂಭಣೆಯಿಂದ ಆಚರಿಸಲು ನಿರ್ಧರಿಸಲಾಗಿದ್ದು, ಈ ನವರಾತ್ರಿ ಉತ್ಸವ ಪೂಜ್ಯ ಮಾತೋಶ್ರೀ ಕಲ್ಯಾಣಮ್ಮ ಸಮುದಾಯ ಭವನದಲ್ಲಿ ಸೆ.22ರಿಂದ ಅಕ್ಟೋಬರ್ 2ರವರೆಗೆ ಜರುಗಲಿದೆ.

ಪೂಜ್ಯ ಮಾತೆಯ ಸದ್ಭಕ್ತರು ಈ ಪೂಜಾ ಅವಧಿಯ ಯಾವುದಾದರೂ ಒಂದು ದಿನ ಆಗಮಿಸಿ, ಪೂಜೆ ಸಲ್ಲಿಸಿ, ಪ್ರಸಾದ ಸ್ವೀಕರಿಸಬಹುದು ಎಂದು ಸೇವಾ ಮಂಡಳಿಯ ಪ್ರಕಟಣೆ ತಿಳಿಸಿದೆ.



ಮಕ್ಕಳ ಮತ್ತು ಮಹಿಳಾ ಇಲಾಖೆ ವತಿಯಿಂದ ನಡೆದ ಜಿಲ್ಲಾ ಮಟ್ಟದ ನೃತ್ಯ ಸ್ಪರ್ಧೆಯಲ್ಲಿ ನಗರದ ನಿಮಿಷಾಂಬಾ ಜ್ಯೋತಿಶ್ರೀ ನಾಟ್ಯ ಅಕಾಡೆಮಿಯ ವಿದ್ಯಾರ್ಥಿನಿಯರು ಪ್ರಶಸ್ತಿಯನ್ನು ತಮ್ಮದಾಗಿಸಿಕೊಂಡಿದ್ದಾರೆ. ಸಾಧನೆ ಮಾಡಿದ ವಿದ್ಯಾರ್ಥಿನಿಯರಿಗೆ ಅಕಾಡೆಮಿಯ ಅಧ್ಯಕ್ಷರಾದ ರಾಘವಿ ಜ್ಯೋತಿಶ್ರೀ ಸೇರಿದಂತೆ ಪದಾಧಿಕಾರಿಗಳು ಮತ್ತು ಪಾಲಕರು ಅಭಿನಂದಿಸಿದ್ದಾರೆ.

## ಜೇಂಟ್ಸ್ ಗ್ರುಪ್ ಆಫ್ ಸಖಿ ಸಹೇಲಿಯಿಂದ ವೃದ್ಧಾಶ್ರಮದ ಹಿರಿಯರಿಗೆ ಗೌರವ

# ವೃದ್ಧಾಶ್ರಮಗಳು ಹೆಚ್ಚಾಗುತ್ತಿರುವದು ವಿಷಾದಕರ

■ವಿಜಯಸಾಕ್ಷಿ ಸುದ್ದಿ, ಗದಗ




ಮುಖ್ಯ ಅತಿಥಿ ವಿದ್ಯಾ ಶಿವನಗುತ್ತಿ ಮಾತನಾಡಿ, ಆರ್ಥಿಕ ಬೆಂಬಲದ ಕೊರತೆ ಹಾಗೂ ಸಾಂಪ್ರದಾಯಿಕ ಅವಿಭಕ್ತ ಕುಟುಂಬ ವ್ಯವಸ್ಥೆಯು ಮುರಿದು ಬಿಳುವದು ವೃದ್ಧರನ್ನು ಪ್ರತ್ಯೇಕವಾಗಿಸುತ್ತದೆ. ಹಿರಿಯರನ್ನು ವೃದ್ಧಾಶ್ರಮದಕ್ಕೆ ಸೇರಿಸುವ ಬದಲು ತಮ್ಮ ಮನೆಯಲ್ಲಿಯೇ ಅವರಿಗೆ ಪ್ರೀತಿ ತೋರಿಸಿದರೆ ಇಳಿ ವಯಸ್ಸಿನಲ್ಲಿ ಅವರಿಗೆ ನೆಮ್ಮದಿ ಸಿಗುವದು ಎಂದರು.

ಬದಲಾಗುತ್ತಿರುವ ಕುಟುಂಬ ರಚನೆಗಳು, ಜೀವನ ಶೈಲಿ, ಆಧುನೀಕರಣದತ್ತ ಒಲವು, ಹಿರಿಯರ ಬಗೆಗೆ ನಿರ್ಲಕ್ಷ್ಯ ಭಾವನೆ ಇವುಗಳಿಂದಾಗಿ ವೃದ್ಧಾಶ್ರಮಗಳ ಸಂಖ್ಯೆ ಗಣನೀಯವಾಗಿ ಹೆಚ್ಚಾಗುತ್ತಿರುವದು ವಿಷಾದನೀಯ ಎಂದು ಜೇಂಟ್ಸ್ ಗ್ರುಪ್ ಆಫ್ ಸಖಿ ಸಹೇಲಿ ಅಧ್ಯಕ್ಷೆ ಸುಮಾ ಪಾಟೀಲ ಹೇಳಿದರು.

ಅವರು ಬೆಟಗೇರಿಯ ಶಿವರತ್ನ ವೃದ್ಧಾಶ್ರಮದಲ್ಲಿ ವೃದ್ಧಾಶ್ರಮದ ಹಿರಿಯರನ್ನು ಗೌರವಿಸಿ ಮಾತನಾಡಿದರು. ವೃದ್ಧರಿಗೆ ವಯೋಸಹಜ ಕಾಯಿಲೆಗಳು, ಸಣ್ಣ ಮಗುವಿನ ಸ್ವಭಾವ ಅವರಲ್ಲಿ ಕಂಡು ಬರುತ್ತದೆ. ಹಿರಿಯರು ಅನುಭವದ ಆಗರವಾಗಿದ್ದಾರೆ. ವಿಶೇಷ ಕಾಳಜಿ ಮತ್ತು ಗಮನ ಅತ್ಯವಿರುತ್ತದೆ. ಅವರು ತಮ್ಮನ್ನು ಪ್ರೀತಿಸುವ ಹಾಗೂ ಆರೈಕೆ ಮಾಡುವವರಿಗಾಗಿ ಹಂಬಲಿಸುತ್ತಾರೆ. ಹಿರಿಯರಿದ್ದರೆ ಮನೆ ಚೆಂದ. ಅನುಭವದೊಂದಿಗೆ ಮನೆಯನ್ನು ರಕ್ಷಣೆ ಮಾಡುವ ಹಿರಿಯರು ನಮಗೆಲ್ಲ ಆದರ್ಶಪ್ರಾಯ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಚಂದ್ರಕಲಾ ಸ್ಥಾವರಮಠ, ಹಿಂದೆ ವಯಸ್ಕ ಮಕ್ಕಳು ತಮ್ಮ ವಯಸ್ಸಾದ ತಂದೆ-ತಾಯಿಗಳನ್ನು ಪೋಷಿಸುವ, ಗೌರವಿಸುವ ಹಾಗೂ ಯಜಮಾನಿಕೆ ನೀಡಿ ಅವರ ಆಜ್ಞೆ ಪಾಲಿಸುವ ಕಾಲವಿತ್ತು. ಯುವ ಪೀಳಿಗೆ ಹೆಚ್ಚು ಸ್ವತಂತ್ರರಾಗುತ್ತಿದ್ದಂತೆಯೇ ಹಿರಿಯರ ಬಗೆಗಿನ ಚಿಂತನೆಗಳು ಬದಲಾಗಿವೆ ಎಂದರು.

ಇನ್ನೋರ್ವ ಅತಿಥಿ ಸುಗ್ಗಲಾ ಯಳಮಲಿ ಮಾತನಾಡಿ, ಹಿರಿಯರು ಮನೆಯಲ್ಲಿದ್ದರೆ ಆ ಮನೆ ನೆಮ್ಮದಿಯ ತಾಣ. ಮಕ್ಕಳಿಗೆ ಪಾಲಕರಾಗಿ, ಮೊಮ್ಮಕ್ಕಳಿಗೆ ಪ್ರೀತಿಯ ಅಜ್ಜ-ಅಜ್ಜಿಯಾಗಿ ಇರುವ ಇವರು ನಾವೆಲ್ಲರೂ ಮನೆಯ ಕಾರ್ಯಗಳನ್ನು ಹಾಗೂ ಬದುಕನ್ನು ಹೇಗೆ ನಿಭಾಯಿಸಬೇಕು ಎಂಬುದನ್ನು ತಿದ್ದಿ ತೀಡುವ ಗುರುಗಳು ಎಂದರು.

ಅಶ್ವಿನಿ ಮಾದಗುಂಡಿ ಪ್ರಾರ್ಥಿಸಿದರು, ಶಾಂತಾ ತುಪ್ಪದ ಸ್ವಾಗತಿಸಿದರು. ರೇಖಾ ರೊಟ್ಟಿ ಪರಿಚಯಿಸಿದರು, ಶ್ರೀದೇವಿ ಮಹೇಂದ್ರಕರ ನಿರೂಪಿಸಿದರು, ಸುಷ್ಮಿತಾ ವೇರ್ಣೆಕರ ವಂದಿಸಿದರು.

ಕಾರ್ಯಕ್ರಮದಲ್ಲಿ ಶಶಿಕಲಾ ಮಾಲೀಪಾಟೀಲ, ಮಂಜುಳಾ ಲಕ್ಕುಂಡಿ, ನಿರ್ಮಲಾ ಪಾಟೀಲ ಮುಂತಾದವರು ಉಪಸ್ಥಿತರಿದ್ದರು.

# ನವೀಕೃತ ಅಂಗನವಾಡಿ ಕೇಂದ್ರಗಳ ಉದ್ಘಾಟನೆ



■ವಿಜಯಸಾಕ್ಷಿ ಸುದ್ದಿ, ಮುಂಡರಗಿ

ತಾಲೂಕಿನ ಕದಾಂಪುರ ಗ್ರಾಮದಲ್ಲಿ ಮಾದರಿ ಅಂಗನವಾಡಿ ಕೇಂದ್ರ-2ರ ನವೀಕೃತ ಕಟ್ಟಡ ಉದ್ಘಾಟನೆ ಕಾರ್ಯಕ್ರಮ ಜರುಗಿ-ತು. ಮುಖ್ಯ ಅತಿಥಿಗಳಾಗಿ ಗದಗ ಜಿಲ್ಲೆಯ ಕೋಟಕ್ ಮಹಿಂದ್ರಾ ಬ್ಯಾಂಕ್‌ನ ಅಸೋಸಿಯೇಟ್ ವೈಸ್ ಪ್ರೆಸಿಡೆಂಟ್ ಈರಯ್ಯ ನಿರ್ವಾಣಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಪದ್ಮಾವತಿ, ಯುನೈಟೆಡ್ ವೇ ಬೆಂಗಳೂರು (ಗಘಃಜ) ಸಂಸ್ಥೆಯ ಭಾಗ್ಯ ಕುಮಾರ್, ಅನಿಲ್ ಕುಮಾರ್, ಮುಂಡರಗಿ ತಾಲೂಕಿನ ಶಿಶು ಅಭಿವೃದ್ಧಿ ಇಲಾಖೆಯ ಅಧಿಕಾರಿಗಳಾದ ಎಂ.ಎಂ. ಈಸರನಾಳ ಉಪಸ್ಥಿತರಿದ್ದರು.

ಗ್ರಾಮದ ಹಿರಿಯರಾದ ರಾಮನಗೌಡ್ರು, ಗ್ರಾಮ ಪಂಚಾಯಿತಿ ಸದಸ್ಯರಾದ ಶಿವು ಬಾದಾಮಿ ಮಾತನಾಡಿ, ಗ್ರಾಮೀಣ ಪ್ರದೇಶದಲ್ಲಿರುವ ಈ 15 ಮಾದರಿ ಅಂಗನವಾಡಿ ಕೇಂದ್ರಗಳನ್ನು ಹೈಟೆಕ್ ಅಂಗನವಾಡಿ ಕೇಂದ್ರಗಳನ್ನಾಗಿ ಮಾಡಿರುವ ಸಂಸ್ಥೆಯವರಿಗೆ ಅಭಿನಂದನೆ ಸಲ್ಲಿಸಿದರು.

'ವಿಶ್ವ ಹಿರಿಯ ನಾಗರಿಕರ ದಿನಾಚರಣೆ' ಪ್ರಯುಕ್ತ ಹಿರಿಯ ನಾಗರಿಕರಿಗೆ ಕ್ರೀಡೆ, ಸಾಂಸ್ಕೃತಿಕ ಕಾರ್ಯಕ್ರಮ

# ಹಿರಿಯರ ಸೇವೆ, ರಕ್ಷಣೆಗೆ ಬದ್ಧ

■ವಿಜಯಸಾಕ್ಷಿ ಸುದ್ದಿ, ಗದಗ

ಜೀವನದಲ್ಲಿ ಅನೇಕ ಏಳು-ಬೀಳುಗಳನ್ನು ದಾಟಿ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿ, ಸದ್ಯ ನಿವೃತ್ತ ಜೀವನ ನಡೆಸುತ್ತಿರುವ ಹಿರಿಯರು ಇಳಿ ವಯಸ್ಸಿನಲ್ಲಿ ಸದಾ ಖುಷಿಯಿಂದ ಇರಬೇಕು. ಜೀವನದಲ್ಲಿ ಮಕ್ಕಳಿಂದ ಅಥವಾ ಇತರೆ ಯಾವುದೇ ರೀತಿಯಿಂದ ತಮಗೆ ಸಮಸ್ಯೆ ಎದುರಾದರೆ ಅವರ ಸಮಸ್ಯೆ ನಿವಾರಿಸುವುದರ ಜೊತೆಗೆ ಹಿರಿಯರ ರಕ್ಷಣೆಗಾಗಿ ಕಾನೂನು ಸೇವೆಗಳ ಪ್ರಾಧಿಕಾರ ಕಾರ್ಯ ನಿರ್ವಹಿಸಿ ನ್ಯಾಯ ಒದಗಿಸುತ್ತದೆ ಎಂದು ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ತಿಳಿಸಿದರು.



ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ವಿಕಲಚೇತನ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಜಿಲ್ಲೆಯಲ್ಲಿ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ವಯಂ ಸೇವಾಸಂಸ್ಥೆ ಮತ್ತು ಸಂಘಗಳ ಸಂಯುಕ್ತ ಆಶ್ರಯದಲ್ಲಿ 'ವಿಶ್ವ ಹಿರಿಯ ನಾಗರಿಕರ ದಿನಾಚರಣೆ-2025'ರ ಪ್ರಯುಕ್ತ ಜಿಲ್ಲಾ ಮಟ್ಟದಲ್ಲಿ ಹಿರಿಯ ನಾಗರಿಕರಿಗೆ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಶುಕ್ರವಾರ ಹಿರಿಯರಿಗಾಗಿ ಏರ್ಪಡಿಸಿದ್ದ ಕ್ರೀಡೆ ಮತ್ತು ಸಾಂಸ್ಕೃತಿಕ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪ್ರೊ. ಕೆ.ಎಚ್. ಬೇಲೂರ ಮಾತನಾಡಿ, ಸರಕಾರದ ಸೌಲಭ್ಯ ಪಡೆದುಕೊಳ್ಳಲು ಹಿರಿಯರು ಮುಂದಾಗಬೇಕು. ನಿವೃತ್ತಿಯ ಜೀವನ ಸದಾ ನೆಮ್ಮದಿಯಿಂದ ಕೂಡಿರಬೇಕೆಂದರು. ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿಗಳು ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಅಧಿಕಾರಿ ಕೆ. ಮಹಾಂತೇಶ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿ, ಇಲಾಖೆಯ ಯೋಜನೆಗಳ ಕುರಿತು ವಿವರಿಸಿದರು. ನಿವೃತ್ತ ಶಿಕ್ಷಕ ಸಜ್ಜನರ ಪ್ರಾರ್ಥಿಸಿದರು. ನಂತರ ಜರುಗಿದ ಹಿರಿಯ ನಾಗರಿಕರ ಕ್ರೀಡೆ ಮತ್ತು ಸಾಂಸ್ಕೃತಿಕ ಕಾರ್ಯಕ್ರಮದ ಉದ್ಘಾಟನೆಯನ್ನು ಹಿರಿಯ ದಿವಾಣಿ ನ್ಯಾಯಾದೀಶರಾದ ಸಿ.ಎಸ್. ಶಿವನಗೌಡ್ರ ಉದ್ಘಾಟಿಸಿ ಕ್ರೀಡೆಗಳಿಗೆ ಚಾಲನೆ ನೀಡಿದರು. ಎಂ.ಸಿ. ಒಗ್ಗಿ ಕಾರ್ಯಕ್ರಮ ನಿರೂಪಿಸಿದರು. ಆರ್.ಟಿ. ನಾರಾಯಣಪುರ ವಂದಿಸಿದರು. ಖಂಡೆಪ್ಪಗೌಡ್ರ, ಜಿ.ಎಸ್. ಹಿರೇಮಠ, ಮಾಲಗಿತ್ತಿಮಠ, ಪ್ರಕಾಶ ಉಪನಾಳ ಸೇರಿದಂತೆ ಹಿರಿಯ ನಾಗರಿಕರು ಹಾಜರಿದ್ದರು.

> ಸಮಾಜದಲ್ಲಿ ಯಾವಾಗಲೂ ಹಿರಿಯನ್ನು ಗೌರವಿಸುವ ಕಾರ್ಯ ನಡೆಯಬೇಕು. ಹಿರಿಯರಲ್ಲಿ ನಾವು ದೇವರನ್ನು ಕಾಣಬೇಕು. ಹಿರಿಯ ಜೀವಿಗಳು ವೃದ್ಧಾಶ್ರಮದಲ್ಲಿ ಇರುವಂತಾಗಬಾರದು. ಈ ಕುರಿತು ಗಂಭೀರ ಚಿಂತನೆಯಾಗಬೇಕೆಂದು ಹೇಳಿದರಲ್ಲದೆ, ಹಿರಿಯ ನಾಗರಿಕರಿಗಾಗಿ ಕ್ರೀಡೆ ಮತ್ತು ಸಾಂಸ್ಕೃತಿಕ ಕಾರ್ಯಕ್ರಮ ಹಮ್ಮಿಕೊಳ್ಳುವುದು ಸೂಕ್ತವಾಗಿದೆ ಎಂದು ಸಿ.ಎಸ್. ಶಿವನಗೌಡ್ರ ಶುಭ ಹಾರೈಸಿದರು.

# ಜಿಲ್ಲಾ ಮಟ್ಟಕ್ಕೆ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಶ್ರೀ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ 2025-26ನೇ ಶೈಕ್ಷಣಿಕ ವರ್ಷದ ಗದಗ ತಾಲೂಕು ಮಟ್ಟದ 'ಎ' ವಲಯದ ಪದವಿಪೂರ್ವ ಕಾಲೇಜುಗಳ ಕ್ರೀಡಾಕೂಟದಲ್ಲಿ ಸ್ವಾಮಿ ವಿವೇಕಾನಂದ ಪದವಿಪೂರ್ವ ವಿಜ್ಞಾನ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಿದ್ದಾರೆ.

ವೈಯಕ್ತಿಕ ಆಟೋಟಗಳಲ್ಲಿ ಈರಣ್ಣ ಕಟಗಿ ಎತ್ತರ ಜಿಗಿತದಲ್ಲಿ ಪ್ರಥಮ, ಜಾವಿದ ಕಾತರಕಿ ಗುಂಡು ಎಸೆತದಲ್ಲಿ ತೃತೀಯ, ಚೆನ್ನಮ್ಮ ರೋಣದ ತ್ರಿವಿಧ ಜಿಗಿತದಲ್ಲಿ ಪ್ರಥಮ ಹಾಗೂ ಉದ್ದ ಜಿಗಿತದಲ್ಲಿ ದ್ವಿತೀಯ, ಬಾಲಕಿಯರ ಚೆಸ್‌ನಲ್ಲಿ ಪವಿತ್ರ ಸನ್ನಿಂಗಣ್ಣವರ್ ಪ್ರಥಮ, ಬಾಲಕರ ವಿಭಾಗದ ಚೆಸ್‌ನಲ್ಲಿ ಅಭಿಷೇಕ್ ಹಿರೇಮಠ ಹಾಗೂ ನವೀದ್ ಕರಡಿ ಪ್ರಥಮ, ಯೋಗಾಸನ ಸ್ಪರ್ಧೆಯಲ್ಲಿ ಶ್ರೀಕಾಂತ್ ಕಂಬಳಿ ಪ್ರಥಮ ಸ್ಥಾನ ಪಡೆದಿದ್ದಾರೆ.

ಗುಂಪು ಆಟಗಳ ಕ್ರಾಸ್ ಕಂಟ್ರಿಯಲ್ಲಿ ಪಾರ್ವತಿ ಯಳವತ್ತಿ, ಪ್ರಗತಿ ಮಾಡಳ್ಳಿ ಹಾಗೂ ಗೌರಿ ಪರ್ವತಗೌಡರ ಪ್ರಥಮ ಸ್ಥಾನ ಪಡೆದಿದ್ದಾರೆ. ಶಟಲ್ ಬ್ಯಾಡ್ಮಿಂಟನ್‌ನಲ್ಲಿ ಅಪೂರ್ವ ಹುದ್ದಾರ, ರಿಂಕು ಲಮಾಣಿ, ಭುವನೇಶ್ವರಿ ಚವರಡ್ಡಿ, ಭಾನುಪ್ರಿಯಾ ಮನಗೂಳಿ ಹಾಗೂ ಅನುಷಾ ಹೊನ್ನಾಯ್ಕರ ಪ್ರಥಮ, ಟೆನಿಕ್ವೈಟ್ ಸ್ಪರ್ಧೆಯಲ್ಲಿ ಗೌರಿ ಪರ್ವತಗೌಡ್ರ, ಭಾನುಪ್ರಿಯಾ ಮನಗೂಳಿ, ಪಾರ್ವತಿ ಯಳವತ್ತಿ ಪ್ರಥಮ ಸ್ಥಾನ ಪಡೆದಿದ್ದಾರೆ.

ಜಿಲ್ಲಾ ಮಟ್ಟಕ್ಕೆ ಆಯ್ಕೆಯಾದ ಕ್ರೀಡಾಪಟುಗಳಿಗೆ ಸಂಸ್ಥೆಯ ಅಧ್ಯಕ್ಷರಾದ ಡಾ. ಎಸ್.ಆರ್. ನಾಗನೂರ, ಆಡಳಿತ ಮಂಡಳಿಯ ಸರ್ವ ಸದಸ್ಯರು, ಪ್ರಾಚಾರ್ಯರಾದ ಪ್ರಿಯಾ ಎಮ್ .ಪಾಟೀಲ, ಕ್ರೀಡಾ ಸಂಚಾಲಕರಾದ ಪ್ರಭು ಅಂಗಡಿ, ಚಂದ್ರಶೇಖರ ಸತರಡ್ಡಿ, ಉಪನ್ಯಾಸಕರು, ಉಪನ್ಯಾಸಕೇತರ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಹರ್ಷ ವ್ಯಕ್ತಪಡಿಸಿದ್ದಾರೆ.


# ಧ.ಗ್ರಾ ಒಕ್ಕೂಟದ ಪದಾಧಿಕಾರಿಗಳಿಗೆ ತರಬೇತಿ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಹಾಲಗೊಂಡ ಬಸವೇಶ್ವರ ದೇವಸ್ಥಾನದ ಆವರಣದಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಲಕ್ಕುಂಡಿ ಮತ್ತು ಕಳಸಾಪುರ ವಲಯದ ಒಕ್ಕೂಟ ಪದಾಧಿಕಾರಿಗಳ ತರಬೇತಿ ಕಾರ್ಯಕ್ರಮ ಜರುಗಿತು.

ಮುಂಡರಗಿ ತಾಲೂಕು ಕ್ಷೇತ್ರದ ಯೋಜನಾಧಿಕಾರಿ ವಿಶಾಲ ಮಲ್ಲಾಪುರ ಕಾರ್ಯಕ್ರಮ ಉದ್ಘಾಟಿಸಿ, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವತಿಯಿಂದ ಸುಜ್ಞಾನ ನಿಧಿ, ಶಿಷ್ಯವೇತನ, ಜನಮಂಗಲ ಜ್ಞಾನವಿಕಾಸ ಕಾರ್ಯಕ್ರಮ, ಸಮುದಾಯ ಅಭಿವೃದ್ಧಿ, ಪ್ರಗತಿ ನಿಧಿ ಕಾರ್ಯಕ್ರಮ, ಗ್ರಾಮ ಮಟ್ಟದಲ್ಲಿ ಒಕ್ಕೂಟದ ರಚನೆ ಹಾಗೂ ಸ್ವ-ಸಹಾಯ ಸಂಘ ಜವಾಬ್ದಾರಿ ಮತ್ತು ಒಕ್ಕೂಟದ ಪದಾಧಿಕಾರಿಗಳ ಜವಾಬ್ದಾರಿಗಳು ಕುರಿತು ತರಬೇತಿ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಒಕ್ಕೂಟದ ಅಧ್ಯಕ್ಷ ಬಸಲಿಂಗಪ್ಪ ಹಡಗಲಿ ಮಾತನಾಡಿ, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಕಾರ್ಯಕ್ರಮಗಳ ಬಗ್ಗೆ ಹಾಗೂ ಶಿಕ್ಷಣದ ಪ್ರಾಮುಖ್ಯತೆಯಲ್ಲಿ ಪೋಷಕರ ಪಾತ್ರಗಳ ಬಗ್ಗೆ ಮಾಹಿತಿ ನೀಡಿದರು. ವಲಯದ ಮೇಲ್ವಿಚಾರಕರಾದ ದಾದಾ ಕಾಲಂದರ್, ನಸೀಮಾ, ಒಕ್ಕೂಟದ ಅಧ್ಯಕ್ಷರಾದ ಫಕ್ಕೀರಮ್ಮ ಬೇಲೇರಿ, ಸಾವಿತ್ರಿ ಯಲಿಶಿರುಂಜ, ಸೇವಾಪ್ರತಿನಿಧಿ ಹಾಗೂ ಗ್ರಾ.ಪಂ ಸದಸ್ಯೆ ರಜಿಯಾ ಬೇಗಂ ತಹಸೀಲ್ದಾರ, ಶಿಲ್ಪಾ ಮೇದಾರ, ಸಲ್ಮಾ ತಹಸೀಲ್ದಾರ, ನೇತ್ರಾವತಿ ರೋಣದ, ರೇಣುಕಾ ಹಳ್ಳಿಗುಡಿ, ಸಲ್ಮಾ ಮೇರಾನಾಯ್ಕರ, ಹೇಮಾ ಮೂಲಿಮನಿ ಹಾಜರಿದ್ದರು.



# ಪ್ರತಿಯೊಬ್ಬರೂ ಶಿಕ್ಷಣವಂತರಾಗಿ, ವೈಚಾರಿಕ ಪ್ರಜ್ಞೆ ಬೆಳೆಸಿಕೊಳ್ಳಿ

▶▶ ಮೊದಲನೇ ಪುಟದಿಂದ



ಡಿ.ಆರ್. ಪಾಟೀಲ, ಬಿ.ಆರ್. ಯಾವಗಲ್, ರಾಮಕೃಷ್ಣ ದೊಡ್ಡಮನಿ, ರಾಮಣ್ಣ ಲಮಾಣಿ, ದಿ. ರಾಕೇಶ ಸಿದ್ದರಾಮಯ್ಯರ ಪುತ್ರ ಧವನ್ ರಾಕೇಶ, ಫಕೀರಪ್ಪ ಹೆಬಸೂರ, ರುದ್ರಣ್ಣ ಗುಳಗುಳಿ ಮುಂತಾದವರು ಉಪಸ್ಥಿತರಿದ್ದರು.

> ಕನಕ ಭವನ ಮತ್ತು ಸಂಗೊಳ್ಳಿ ರಾಯಣ್ಣ ಮೂರ್ತಿ ಉದ್ಘಾಟನೆಯನ್ನು ಸ್ಮರಿಸಿಕೊಂಡ ಸಿದ್ದರಾಮಯ್ಯ, ಜಿಲ್ಲಾ ಕುರುಬರ ಸಂಘದ ಜಿಲ್ಲಾಧ್ಯಕ್ಷ ಫಕೀರಪ್ಪ ಹೆಬಸೂರ ಅವರೊಂದಿಗೆ 42 ವರ್ಷಗಳ ಒಡನಾಟವಿದೆ. ಫಕೀರಪ್ಪ ಹೆಬಸೂರ್, ರೊಳ್ಳಿ ಮತ್ತು ಕೊಪ್ಪ ಅವರಿಂದ ಈ ಕಾರ್ಯಕ್ರಮವು ಯಶಸ್ವಿಯಾಗಿದೆ ಎಂದರು.

# ಇದು ಕೇವಲ ಜಾತಿ ಸಮೀಕ್ಷೆಯಲ್ಲ

▶▶ ಮೊದಲನೇ ಪುಟದಿಂದ

ಷಡ್ಯಂತ್ರವಿರಲಿದೆಯೇ? ಸಮೀಕ್ಷೆಗೆ ಯಾವುದೇ ಸಚಿವರು ವಿರೋಧ ವ್ಯಕ್ತಪಡಿಸಿಲ್ಲ. ಸಮಾಜದಲ್ಲಿ ಸಮಾನತೆ ತರಲು ಬಡವರಿಗೆ ಸರ್ಕಾರಿ ಯೋಜನೆಗಳಲ್ಲಿ ಆದ್ಯತೆ ನೀಡಬೇಕಾಗುತ್ತದೆ ಎಂದರು.

ಸಮೀಕ್ಷೆಯ ನಿರ್ಧಾರವನನ್ನು ಮರುಪರಿಶೀಲಿಸಲು ಮಾನ್ಯ ರಾಜ್ಯಪಾಲರು ಸೂಚನೆ ನೀಡುವಂತೆ ಬಿಜೆಪಿಯವರು ಮನವಿ ಸಲ್ಲಿಸಿರುವ ಬಗ್ಗೆ ಬಗ್ಗೆ ಪ್ರತಿಕ್ರಿಯೆ ನೀಡಿ, ಸಮೀಕ್ಷೆಯ ವಿಚಾರದಲ್ಲಿ ಬಿಜೆಪಿ ರಾಜಕೀಯ ಮಾಡುತ್ತಿದೆ. ಸಮೀಕ್ಷೆಯ ವಿಚಾರದಲ್ಲಿ ಜಾತಿ ಒಡೆಯುವ ಪ್ರಶ್ನೆಯೇ ಇಲ್ಲ ಎಂದರು.

ಕುರುಬ ಸಮಾಜವನ್ನು ಎಸ್‌ಟಿಗೆ ಸೇರಿಸುವ ಬಗ್ಗೆ ಪ್ರತಿಕ್ರಿಯಿಸಿ, ಕುರುಬ ಸಮಾಜವನ್ನು ಎಸ್‌ಟಿಗೆ ಸೇರಿಸುವ ಶಿಫಾರಸ್ಸನ್ನು ಹಿಂದಿನ ಬಿಜೆಪಿ ಸರ್ಕಾರವೇ ಮಾಡಿತ್ತು. ಆದರೆ ಈ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರ ವಾಪಸ್ಸು ಕಳಿಸಿದ್ದು, ಅದಕ್ಕೆ ವಿವರಣೆಯನ್ನು ಸರ್ಕಾರ ನೀಡಲಿದೆ. ಯಾವುದೇ ಸಮುದಾಯವನ್ನು ಎಸ್‌ಟಿಗೆ ಸೇರಿಸುವ ನಿರ್ಧಾರವನ್ನು ಕೇಂದ್ರ ಸರ್ಕಾರವೇ ತೆಗೆದುಕೊಳ್ಳುತ್ತದೆ ಎಂದರು.

ರಾಜ್ಯದಲ್ಲಿ ಭಾರೀ ಮಳೆಯಿಂದ ಬೆಳೆಹಾನಿ ಸಂಭವಿಸಿರುವ ಕುರಿತಾಗಿ ಉತ್ತರಿಸುತ್ತಾ, ರಾಜ್ಯದಲ್ಲಿ ಸಂಭವಿಸಿರುವ ಬೆಳೆಹಾನಿ ಬಗ್ಗೆ ಜಂಟಿ ಸಮೀಕ್ಷೆ ನಡೆಸಲಾಗುತ್ತಿದ್ದು, ವರದಿ ಬಂದ ನಂತರ ಬೆಳೆ ಪರಿಹಾರ ನೀಡಲಾಗುವುದು. ಗದಗ ಜಿಲ್ಲೆಯಲ್ಲಿ ಇನ್ನೆರಡು ದಿನಗಳಲ್ಲಿ ಜಂಟಿ ಸಮೀಕ್ಷೆ ಪೂರ್ಣಗೊಳ್ಳಲಿದೆ ಎಂದರು.

ಈ ಸಂದರ್ಭದಲ್ಲಿ ಸಚಿವ ಎಚ್.ಕೆ. ಪಾಟೀಲ, ವಿಧಾನ ಪರಿಷತ್ ಸದಸ್ಯ ಸಲೀಂ ಅಹ್ಮದ್, ಶಾಸಕರಾದ ಜಿ.ಎಸ್. ಪಾಟೀಲ, ಎನ್.ಎಚ್. ಕೋನರಡ್ಡಿ ಮುಂತಾದವರಿದ್ದರು.

# ಚಿಕನ್ ಅಂಗಡಿಗಳನ್ನು ಸ್ಥಳಾಂತರಿಸಿ

▶▶ ಮೊದಲನೇ ಪುಟದಿಂದ

ಪುರಸಭೆ ವಾಣಿಜ್ಯ ಸಂಕೀರ್ಣದಲ್ಲಿ ಅನೇಕ ವರ್ಷಗಳಿಂದ ಕೆಲವು ಬಾಡಿಗೆದಾರರು ನೆಲೆಯೂರಿದ್ದು, ಅವಧಿ ಎಷ್ಟು ಎಂದು ತಿಳಿಯದಾಗಿದೆ. ಇವೆಲ್ಲವನ್ನೂ ಪರಿಶೀಲಿಸಿ ಹೊಸದಾಗಿ ವಾಣಿಜ್ಯ ಮಳಿಗೆಗಳ ಟೆಂಡರ್ ಕರೆದು ಬೇರೆಯವರಿಗೆ ಅವಕಾಶ ಮಾಡಿಕೊಡಬೇಕು ಎಂದು ಮನವಿ ಮಾಡಿದರು.

ವಾರ್ಡ್‌ನ ಹಂಜಗಿ ಓಣಿ, ಬಸವೇಶ್ವರ ನಗರದ ರಸ್ತೆ, ಚರಂಡಿ ಹದಗೆಟ್ಟಿವೆ. ಸೊಳ್ಳೆಗಳ ಕಾಟ ಮೀತಿಮೀರಿದೆ ಎಂದು ವಾರ್ಡ್ ನಿವಾಸಿಗಳು ಅಭಿಪ್ರಾಯ ವ್ಯಕ್ತಪಡಿಸಿದರು.

ಈ ವೇಳೆ ಪುರಸಭೆ ಮುಖ್ಯಾಧಿಕಾರಿ ಮಹಾಂತೇಶ ಬೀಳಗಿ ಹಾಗೂ ಅನಿಲ ಮುಳುಗುಂದ ಅವರನ್ನು ಸನ್ಮಾನಿಸಲಾಯಿತು. ಸದಸ್ಯೆ ಪೂಜಾ ಖರಾಟೆ, ಎನ್.ಆರ್. ಸಾತಪುತೆ, ಸತೀಶ ನಾರಾಯಣಕರ, ಕಪ್ಪತ್ತಪ್ಪ ಖರಾಟೆ, ಮಂಜುನಾಥ ಗಜಾಕೋಶ, ಯಲ್ಲವ್ವ ಗಜಾಕೋಶ, ವಿಜಯಾ ಖರಾಟೆ, ರೇಖಾ ಖರಾಟೆ, ಯಂಕವ್ವ ಖರಾಟೆ ಸೇರಿದಂತೆ ವಾರ್ಡ್‌ನ ಸಾರ್ವಜನಿಕರು ಹಾಜರಿದ್ದರು.

# ಉಚಿತ ನೇತ್ರ ತಪಾಸಣಾ ಶಿಬಿರ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶಂಕರ ಕಣ್ಣಿನ ಆಸ್ಪತ್ರೆ ಶಿವಮೊಗ್ಗ, ಕರ್ನಾಟಕ ರಾಜ್ಯ ಹಿರಿಯ ನಾಗರಿಕರ ಹಾಗೂ ನಿವೃತ್ತ ನೌಕರರ ಸಂಘ, ತಾಲೂಕು ವೈದ್ಯರ ಸಂಘ ಲಕ್ಷೇಶ್ವರ, ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಬಿಸಿ ಟ್ರಸ್ಟ್ ಶಿರಹಟ್ಟಿ/ಲಕ್ಷ್ಮೇಶ್ವರ, ವಿಶ್ವ ಕಂಪ್ಯೂಟರ್ ಅಕ್ಯಾಡೆಮಿ, ಶಿರಹಟ್ಟಿ ತಾಲೂಕು ಔಷಧ ವ್ಯಾಪಾರಸ್ಥರ ಸಂಘ ಲಕ್ಷೇಶ್ವರ ಇವರ ಸಂಯುಕ್ತ ಆಶ್ರಯದಲ್ಲಿ ಪಟ್ಟಣದ ಜ್ಯೋತಿ ನರ್ಸಿಂಗ್ ಹೋಂನಲ್ಲಿ 9ನೇ ಉಚಿತ ನೇತ್ರ ತಪಾಸಣಾ ಶಿಬಿರ ನಡೆಯಿತು.



ಕರ್ನಾಟಕ ರಾಜ್ಯ ಹಿರಿಯ ನಾಗರಿಕರ ಹಾಗೂ ನಿವೃತ್ತ ನೌಕರರ ಸಂಘದ ಸಿ.ಆರ್. ಲಕ್ಕುಂಡಿಮಠ ಶಿಬಿರ ಉದ್ಘಾಟಿಸಿ ಮಾತನಾಡಿ, ಬಡ ಜನತೆಗೆ ಅನುಕೂಲವಾಗಲಿ ಎಂಬ ಉದ್ದೇಶದಿಂದ ಪ್ರತಿ ತಿಂಗಳು ಉಚಿತ ನೇತ್ರ ತಪಾಸಣೆ ಮತ್ತು ಚಿಕಿತ್ಸಾ ಶಿಬಿರ ನಡೆಸಿಕೊಂಡು ಬರಲಾಗುತ್ತಿದೆ. ಶಿಬಿರದ ಬಗ್ಗೆ ಮಾಹಿತಿ ಪಡೆದುಕೊಂಡು ಜನರು ಅದರ ಉಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು. ಡಾ. ಪಿ.ಡಿ. ತೋಟದ ಮಾತನಾಡಿ, ಆರ್ಥಿಕವಾಗಿ ಹಿಂದುಳಿದಿರುವ ಬಡ ಜನರಿಗೆ ಉಚಿತ ಕಣ್ಣಿನ ಶಸ್ತ್ರ ಚಿಕಿತ್ಸೆ ನಡೆಸಲಾಗುತ್ತಿದೆ. ಶಿಬಿರದಲ್ಲಿ ಶಸ್ತ್ರ ಚಿಕಿತ್ಸೆಗೆ ಅರ್ಹರಾದವರಿಗೆ ಶಿವಮೊಗ್ಗದ ಶಂಕರ ಕಣ್ಣಿನ ಆಸ್ಪತ್ರೆಯಲ್ಲಿ ಲೆನ್ಸ್ ಅಳವಡಿಸಲಾಗುತ್ತಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಚಂಬಣ್ಣ ಬಾಳಿಕಾಯಿ, ಎನ್.ವಿ. ಹೇಮಗಿರಿಮಠ, ಪ್ರಕಾಶ ಉಪನಾಳ, ಬಸವರಾಜ ಸಂಗಪ್ಪಶೆಟ್ಟರ, ಡಾ. ರಾಧಿಕಾ, ಶಕುಂತಲಾ ಅಳಗವಾಡಿ, ನಾಗರಾಜ ಸೂರಣಗಿ, ಡಾ. ನಾಗರಾಜ ವಾಲಿ, ಡಾ. ಪ್ರಸನ್ ಕುಲಕರ್ಣಿ, ಡಾ. ಅಮರೇಶ ಅಮರಶೆಟ್ಟರ, ಡಾ. ಎಂ.ಆರ್. ಕಲಿವಾಳ, ಪುನೀತ್ ಓಲೇಕಾರ, ಐ.ಎಸ್. ಮಡಿವಾಳರ ಇದ್ದರು. ಶಿಬಿರದಲ್ಲಿ 250 ಜನರ ನೇತ್ರ ತಪಾಸಣೆ ನಡೆಸಲಾಯಿತು. ಅದರಲ್ಲಿ 43 ಜನರನ್ನು ಚಿಕಿತ್ಸೆಗೆ ಆಯ್ಕೆ ಮಾಡಿ ಅವರನ್ನು ಆಸ್ಪತ್ರೆಯ ವಾಹನದಲ್ಲಿಯೇ ಶಿವಮೊಗ್ಗದ ಆಸ್ಪತ್ರೆಗೆ ಕಳುಹಿಸಿ ಕೊಡಲಾಯಿತು.

# ಸಾರ್ವಜನಿಕರ ಸಮಸ್ಯೆಗಳ ತ್ವರಿತ ಪರಿಹಾರಕ್ಕೆ ಪೂರಕವಾಗಲಿ

▶▶ ಮೊದಲನೇ ಪುಟದಿಂದ




ಅಹವಾಲುಗಳಿಗೂ ಪರಿಹಾರ ಕಂಡುಕೊಳ್ಳಲಾಗಿದೆ. ಇದೊಂದು ಮಾದರಿ ಕಾರ್ಯಕ್ರಮವಾಗಿದ್ದು, ಮುಂದಿನ ಹಂತದಲ್ಲಿ ವಿಸ್ತರಣೆ ಮಾಡುವ ಕುರಿತು ಯೋಜಿಸಲಾಗುತ್ತಿದೆ ಎಂದು ಮಾಹಿತಿ ಒದಗಿಸಿದರು.

ಪ್ರ.ಪ್ರ. ಕಾರ್ಯಕ್ರಮ ಕುರಿತಂತೆ ನಗರದಲ್ಲಿ ಒಟ್ಟು ಮೂರು ಕಡೆ ಯಂತ್ರಗಳನ್ನು ಇರಿಸಲಾಗಿದೆ. ಜಿಲ್ಲಾ ಕ್ರೀಡಾಂಗಣ, ಜವಳ ಗಲ್ಲಿ ಹಾಗೂ ಬೆಟಗೇರಿಯ ತೆಂಗಿನಕಾಯಿ ಬಜಾರಿನಲ್ಲಿ ಪ್ರ.ಪ್ರ. ಯಂತ್ರಗಳು ಪ್ರಸ್ತುತ ಕಾರ್ಯ ನಿರ್ವಹಿಸುತ್ತಿವೆ. ಸಾರ್ವಜನಿಕರು ದಿನದ 24 ಗಂಟೆಗಳಲ್ಲಿಯೂ ತಮ್ಮ ಸಮಸ್ಯೆಗಳನ್ನು ಹೇಳಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ ಎಂದರು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ, ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಚ್.ಎಂ. ರೇವಣ್ಣ, ವಿಧಾನ ಪರಿಷತ್ ಸದಸ್ಯರು ಹಾಗೂ ಸರ್ಕಾರದ ಮುಖ್ಯ ಸಚೇತಕರಾದ ಸಲೀಂ ಅಹ್ಮದ್, ರೋಣ ಶಾಸಕ ಜಿ.ಎಸ್. ಪಾಟೀಲ, ಶಾಸಕ ಎನ್.ಎಚ್. ಕೋನರೆಡ್ಡಿ, ಹೆಸ್ಕಾಂ ಅಧ್ಯಕ್ಷ ಅಜ್ಜಂಫೀರ ಖಾದ್ರಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ಪ್ರಾದೇಶಿಕ ಆಯು-ಕ್ತೆ ಜಾನಕಿ ಕೆ.ಎಂ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ಹಿರಿಯರು, ಗಣ್ಯರು, ಸಾರ್ವಜನಿಕರು ಹಾಜರಿದ್ದರು.


10ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆ-2025

# ಶ್ರೀ ಧನ್ವಂತರಿ ಜಯಂತಿ ಸೆ.23ಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರ ಹಾಗೂ ರಾಜ್ಯ ಸರ್ಕಾರ, ಆಯುಷ್ ಇಲಾಖೆ ಬೆಂಗಳೂರು, ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆಯುಷ್ ಇಲಾಖೆ ಗದಗ ಇವರುಗಳ ಸಂಯುಕ್ತ ಆಶ್ರಯದಲ್ಲಿ 'ಶ್ರೀ ಧನ್ವಂತರಿ ಜಯಂತಿ' 10ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆ-2025 ಕಾರ್ಯಕ್ರಮವನ್ನು ಸೆಪ್ಟೆಂಬರ್ 23ರಂದು ಬೆಳಿಗ್ಗೆ 10 ಗಂಟೆಗೆ ನಗರದ ಜಿಲ್ಲಾ ಪಂಚಾಯಿತಿ ಸಭಾಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಚಿವ ದಿನೇಶ ಗುಂಡೂರಾವ್ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ. ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಮತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.



> **ಆಯುರ್ವೇದ ಜಾಥಾ**
>
> ರಾಷ್ಟ್ರೀಯ ಆಯುರ್ವೇದ ದಿನಾಚರಣೆ ನಿಮಿತ್ತ ಸೆ. 22ರಂದು ಬೆಳಿಗ್ಗೆ 9 ಗಂಟೆಗೆ ಆಯುರ್ವೇದ ಜಾಥಾ ಜರುಗಲಿದೆ. ಸರ್ಕಾರಿ ಆಯುರ್ವೇದ ಆಸ್ಪತ್ರೆ, ಬೆಟಗೇರಿ ಆವರಣದಿಂದ ಪ್ರಾರಂಭಗೊಂಡು, ಪೊಲೀಸ್ ವಸತಿ ನಿಲಯದ ಮಾರ್ಗವಾಗಿ, ಶ್ರೀ ನೀಲಕಂಠ ಮಠ, ಶ್ರೀಮೈಲಾರಲಿಂಗೇಶ್ವರ ದೇವಸ್ಥಾನ, ಶ್ರೀ ಅಂಬಾಭವಾನಿ ವೃತ್ತ, ಶ್ರೀ ಸಹಸ್ರಾರ್ಜುನ ವೃತ್ತ ಮಾರ್ಗವಾಗಿ, ಸರ್ಕಾರಿ ಆಯುರ್ವೇದ ಆಸ್ಪತ್ರೆ ಬೆಟಗೇರಿ ಆವರಣಕ್ಕೆ ಜಾಥಾ ತಲುಪುವುದು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಶಾಸಕ ಸಲೀಂ ಅಹ್ಮದ್, ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ, ಸಂಸದ ಪಿ.ಸಿ. ಗದ್ದಿಗೌಡರ, ವಿಧಾನ ಪರಿಷತ್ ಶಾಸಕರುಗಳಾದ ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ, ನರಗುಂದ ಶಾಸಕ ಸಿ.ಸಿ. ಪಾಟೀಲ, ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಆಗಮಿಸಲಿದ್ದಾರೆ.

ವಿಶೇಷ ಆಹ್ವಾನಿತರಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಹರ್ಷ ಗುಪ್ತಾ, ಯೋಜನೆ, ಕಾರ್ಯಕ್ರಮ, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಆಯುಷ್ ನಿರ್ದೇಶನಾಲಯದ ಆಯುಕ್ತ ವಿಪಿನ್ ಸಿಂಗ್, ಜಿಲ್ಲಾಧಿಕಾರಿ ಹಾಗೂ ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸಿ.ಎನ್. ಶ್ರೀಧರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಆಗಮಿಸುವರು.

ಜಿಲ್ಲಾ ಆಯುಷ್ ಅಧಿಕಾರಿ ಡಾ. ಜಯಪಾಲಸಿಂಗ ಪಿ.ಸಮೋರೇಕರ ಸರ್ವರಿಗೂ ಸ್ವಾಗತ ಕೋರಿದ್ದಾರೆ.

**ಶಿಂಗಟಾಲೂರ ಏತ ನೀರಾವರಿ ಮೂಲಕ ರೈತರ ಜಮೀನುಗಳಿಗೆ ನೀರು, ಆವರಿಸಿದ ಹಸಿರು**

# ರೈತರಲ್ಲಿ ಹರ್ಷ ಮೂಡಿಸಿದ ಸರ್ಕಾರ

■ **ವಿಜಯಸಾಕ್ಷಿ ಸುದ್ದಿ, ಡಂಬಳ**

ಹಮ್ಮಿಗಿ ಬಳಿ ತುಂಗಭದ್ರಾ ನದಿಗೆ ಅಡ್ಡಲಾಗಿ ನಿರ್ಮಿಸಿರುವ ಶಿಂಗಟಾಲೂರ ಏತನೀರಾವರಿ (ಹುಲಿಗುಡ್ಡ) ಯೋಜನೆಯಿಂದ ಮುಂಡರಗಿ, ಹಡಗಲಿ, ಕೊಪ್ಪಳ, ಗದಗ ಜಿಲ್ಲೆಯ ರೈತರಿಗೆ ವರದಾನವಾಗಿದ್ದು, ನೀರು ಬಳಸಿಕೊಳ್ಳುವ ರೈತರು ವಾಣಿಜ್ಯ ಬೆಳೆ ಬೆಳೆದು, ಆರ್ಥಿಕವಾಗಿ ಸಬಲತೆ ಹೊಂದುವಂತಾಗಿದೆ.

2013ರಲ್ಲಿ ಅಂದಿನ ಮುಖ್ಯಮಂತ್ರಿ ಹಾಗೂ ಹಾಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಶಿಂಗಟಾಲೂರ ಯೋಜನೆ ನಾಡಿಗೆ ಸಮರ್ಪಣೆ ಮಾಡುತ್ತಿದ್ದಂತೆ ಈ ಭಾಗದ ಬರದ ನಾಡಾಗಿರುವ ಗದಗ, ಮುಂಡರಗಿ, ಹೂವಿನಹಡಗಲಿ, ಕೊಪ್ಪಳ ಭಾಗದ ರೈತರನ್ನು ಬರದ ದವಡೆಯಿಂದ ಪಾರುಮಾಡಲಾಗಿದೆ. ಈ ಯೋಜನೆಯಿಂದ ಡಂಬಳದ ಬೃಹತ್ ಕರೆ, ಬಸಾಪೂರ ಕೆರೆ, ಹಿರೇವಡ್ಡಟ್ಟಿ ಕೆರೆ, ತಾಂಬರಗುಂಡಿ ಕೆರೆ, ಪೇಠಾಲೂರ ಕೆರೆ, ಜಂತ್ಲಿ-ಶಿರೂರ



ಕೆರೆಗಳು ಭರ್ತಿಯಾಗಿರುವದರಿಂದ ಈ ಭಾಗದ ರೈತರ ಮೊಗದಲ್ಲಿ ಹರ್ಷ ತುಂಬಿದೆ.

2013ರಲ್ಲಿ ಚುನಾವಣಾ ಪೂರ್ವ ಮಾತುಕೊಟ್ಟಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವ ಎಚ್.ಕೆ. ಪಾಟೀಲ ಹಾಗೂ ರೋಣದ ಜನಪ್ರಿಯ ಶಾಸಕ ಜಿ.ಎಸ್. ಪಾಟೀಲರ ಪ್ರಯತ್ನದ ಫಲವಾಗಿ ಶಿಂಗಟಾಲೂರ ಯೋಜನೆಯಿಂದ ರೈತರಿಗೆ ನೀರು ಸಿಗುವಂತಾಗಿ ಈ ಭಾಗದಲ್ಲಿ ಸಮೃದ್ಧಿ ನೆಲೆಯೂರುವಂತಾಯಿತು. ಸತತ ಅನಾವೃಷ್ಟಿಯಿಂದ ಈ ಭಾಗದಲ್ಲಿ ಹಳ್ಳ-ಕೊಳ್ಳಗಳು ಬತ್ತಿ ಬರಿದಾಗಿದ್ದವು. ಈ ಭಾಗದ ರೈತ ಕುಟುಂಬಗಳು ಗೋವಾ, ಮಂಗಳೂರು, ಮಹಾರಾಷ್ಟ್ರಗಳಿಗೆ ದುಡಿಯಲು ಗುಳೆ ಹೋಗಿ ರೈತರ ಜೀವನ ಕಷ್ಟದಾಯಕವಾಗಿತ್ತು.

ಕೆಲ ರೈತರು ಸಾಲದ ದವಡೆಗೆ ಸಿಲುಕಿ ಆತ್ಮಹತ್ಯೆಯ ದಾರಿ ಹಿಡಿದಿದ್ದರು. ಇದನ್ನು ಗಂಭೀರವಾಗಿ ಪರಿಗಣಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಈ ಯೋಜನೆಗೆ ಹಣಕಾಸು ನೆರವು ನೀಡಿ 1991ರಿಂದ ನೆನೆಗುದಿಗೆ ಬಿದ್ದಿದ್ದ ಯೋಜನೆಗೆ ಕಾಯಕಲ್ಪ ನೀಡಿದರು. ಅಂದಿನ ಬೃಹತ್ ನೀರಾವರಿ ಸಚಿವರಾಗಿದ್ದ ಎಚ್.ಕೆ. ಪಾಟೀಲ ಹಾಗೂ ಶಾಸಕರಾದ ಜಿ.ಎಸ್. ಪಾಟೀಲರ ಮುತುವರ್ಜಿಯಿಂದ ಈ ಯೋಜನೆ ಪೂರ್ಣಗೊಂಡಿತು. 1991ರಲ್ಲಿ ಮುಂಡರಗಿ ಸಚಿವರಾಗಿದ್ದ ಎಸ್.ಎಸ್. ಪಾಟೀಲ ಹಾಗೂ ಇನ್ನೋರ್ವ ಸಚಿವ ಎಂ.ಪಿ. ಪ್ರಕಾಶರವರು ಈ ಯೋಜನೆಗೆ 6 ಟಿ.ಎಂ.ಸಿ. ನೀರು ಬಳಕೆಗೆ ಮಂಜೂರಾತಿ ನೀಡಿ ಯೋಜನೆ ಆರಂಭಿಸಿದ್ದರು. ಎಚ್.ಕೆ. ಪಾಟೀಲರು ಬೃಹತ್ ನೀರಾವರಿ ಸಚಿವರಾಗುತ್ತಿದ್ದಂತೆ ಕೆ.ಸಿ. ರೆಡ್ಡಿಯವರ ವರದಿಯನ್ನು ಧಿಕ್ಕರಿಸಿ 18 ಟಿ.ಎಂ.ಸಿ. ನೀರು ಬಳಕೆಗೆ ಯೋಜನೆ ಸಿದ್ಧಪಡಿಸಿ ಮಂಜೂರಾತಿ ನೀಡಿದ್ದರು.

ಈ ಭಾಗದಲ್ಲಿ ಬರಗಾಲ, ರೈತರ ಆತ್ಮಹತ್ಯೆಯನ್ನು ತಡೆಯಬೇಕು, ರೈತರ ತೊಂದರೆಯನ್ನು ತಪ್ಪಿಸಬೇಕು, ರೈತ ಸಮೂಹವನ್ನು ಆರ್ಥಿಕವಾಗಿ ಮುಖ್ಯ ಪ್ರವಾಹಿನಿಗೆ ತರಬೇಕೆಂದು ಮುಖ್ಯಮಂತ್ರಿ ಸಿದ್ಧರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರ ಸಹಕಾರದ ಮೇರೆಗೆ ನೂರಾರು ಕೋಟಿ ಅನುದಾನ ತಂದು ಕೆರೆಗಳನ್ನು ಭರ್ತಿಮಾಡುವ ಯೋಜನೆಯನ್ನು ಸಾಕಾರಗೊಳಿಸಲು ಸಾಧ್ಯವಾಗಿದೆ.

**– ಜಿ.ಎಸ್. ಪಾಟೀಲ.**
ರೋಣ ಮತಕ್ಷೇತ್ರದ ಶಾಸಕರು.

ಶಿಂಗಟಾಲೂರ ಯೋಜನೆ ಪೂರ್ಣಗೊಳಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯನವರು, ಸಚಿವ ಎಚ್.ಕೆ. ಪಾಟೀಲರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲರು ರೈತರ ಕಣ್ಣೀರು ಒರೆಸುವಲ್ಲಿ ನೆರವಾಗಿದ್ದಾರೆ. ಹೋಬಳಿಯ ಸಮಸ್ತ ರೈತ ಬಾಂಧವರ ಪರವಾಗಿ ಅಭಿನಂದನೆಗಳನ್ನು ಸಲ್ಲಿಸುತ್ತೇವೆ.

**– ಗೋಣಿಬಸಪ್ಪ ಕೊರ್ಲಹಳ್ಳಿ.**
ಯುವ ಮುಖಂಡರು, ಡಂಬಳ.

## ರೈತರಲ್ಲಿ ಹರ್ಷ

ಮಳೆಯ ಅಭಾವದಿಂದ ಬೇಸತ್ತಿದ್ದ ರೈತರಿಗೆ ಈ ಯೋಜನೆ ಭರವಸೆ ಬೆಳಕಾಯಿತು. ರೈತರು ಈ ನೀರು ಬಳಸಿಕೊಂಡು ಈರುಳ್ಳಿ, ಗೋವಿನಜೋಳ, ಹತ್ತಿ, ಕಬ್ಬು, ಸೂರ್ಯಕಾಂತಿ ಬೆಳೆದು ತೋಟಗಾರಿಕಾ ಬೆಳೆಗಳಾದ ಪೇರಲೆ, ದಾಳಿಂಬೆ, ಬಾಳೆ ಇತ್ಯಾದಿಗಳನ್ನು ಬೆಳೆದು ಮುಂಚೂಣೀಯಲ್ಲಿ ಕಾಣಿಸಿಕೊಂಡಿದ್ದಾರೆ. ಕೆರೆಗಳಲ್ಲಿ ಹಳ್ಳ, ಸರೋವರಗಳಲ್ಲಿ ನೀರು ತುಂಬಿರುವುದರಿಂದ ಬತ್ತಿ ಹೋಗಿದ್ದ ಬೋರ್‌ವೆಲ್‌ಗಳಲ್ಲಿ ನೀರು ಚಿಮ್ಮುತ್ತಿದೆ. ಇದರಿಂದ ಬರ ದೂರವಾಗಿ ಈ ಭಾಗವೀಗ ಸಂಪೂರ್ಣ ಹಸಿರು ಸಮೃದ್ಧಿಯಿಂದ ಕಂಗೊಳಿಸುತ್ತಿದೆ.



# ವಿವಿಧೆಡೆ ಆಧಾರ್ ಸೇವಾ ಕೇಂದ್ರ ಆರಂಭ



■ **ವಿಜಯಸಾಕ್ಷಿ ಸುದ್ದಿ, ಗದಗ**

ಪ್ರಧಾನ ಅಂಚೆ ಕಚೇರಿ ಸೇರಿದಂತೆ ಗದಗ-ಬೆಟಗೇರಿ, ಗದಗ ನಗರ, ನರಗುಂದ, ರೋಣ, ಹೊಳೆಆಲೂರ, ಗಜೇಂದ್ರಗಡ, ಶಿರಹಟ್ಟಿ, ಮುಂಡರಗಿ, ಲಕ್ಷ್ಮೇಶ್ವರ, ಬೆಳ್ಳಟ್ಟಿ ಅಂಚೆ ಕಚೇರಿಗಳಲ್ಲಿ ಆಧಾರ್ ಸೇವಾ ಕೇಂದ್ರ ಆರಂಭಿಸಲಾಗಿದೆ. ಸಾರ್ವಜನಿಕರಿಗೆ ಅನುಕೂಲ ಕಲ್ಪಿಸುವ ಹಿನ್ನಲೆಯಲ್ಲಿ ಆಧಾರ್ ಕಾರ್ಡ್ ತಿದ್ದುಪಡಿ ಸಲುವಾಗಿ ಆಧಾರ್ ಸೇವಾ ಕೇಂದ್ರ ವಿಶೇಷ ಕೌಂಟರ್ ಸಹ ಆರಂಭಿಸಲಾಗಿದೆ. ಅಂಚೆ ಕಚೇರಿ ಸೇವಾ ಅವಧಿಯಲ್ಲಿ ಆಧಾರ್ ಸೇವಾ ಕೇಂದ್ರ ಕಾರ್ಯ ನಿರ್ವಹಿಸುತ್ತವೆ. ಹಾಗಾಗಿ ಜನರು ಈ ಸೇವಾ ಕೇಂದ್ರದಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದು ಗದಗ ವಿಭಾಗೀಯ ಅಂಚೆ ಅಧೀಕ್ಷಕ ರಮೇಶ ಮಡಿವಾಳರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಾಳೆ ವಿದ್ಯುತ್ ವ್ಯತ್ಯಯ

■ **ವಿಜಯಸಾಕ್ಷಿ ಸುದ್ದಿ, ಗದಗ**

110 ಕೆವ್ಹಿ ಬೆಟಗೇರಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ಸೆ. 22ರಂದು ತ್ರೈಮಾಸಿಕ ಕೆಲಸ ಕೈಗೊಳ್ಳುವುದರಿಂದ ಮುಂಜಾನೆ 10 ಗಂಟೆಯಿಂದ ಸಾಯಂಕಾಲ 5.30 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ. 110 ಕೆವ್ಹಿ ಬೆಟಗೇರಿ ಉಪಕೇಂದ್ರದಿಂದ ಪೂರೈಕೆಯಾಗುವ ಎಲ್ಲಾ ನಗರ, ಕೈಗಾರಿಕಾ, ನಿರಂತರಜ್ಯೋತಿ, ಇ.ಐ.ಪಿ, ಸೋಲಾರ್ ಐ.ಪಿ.ಪಿ, ಮತ್ತು ಗ್ರಾಮೀಣ ಪ್ರದೇಶಗಳ ಎಲ್ಲಾ 11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಕಂಪನಿಯೊಂದಿಗೆ ಸಹಕರಿಸಬೇಕಾಗಿ ಹೆಸ್ಕಾಂ ಪ್ರಕಟಣೆ ತಿಳಿಸಿದೆ.

# 'ಶರಣ ಸಂಗಮ' ಇಂದು

■ **ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಸೆ. 21ರಂದು ಬೆಳಿಗ್ಗೆ 10ಕ್ಕೆ ನಡೆಯಲಿರುವ ಬಸವದಳದ 1664ನೇ ಶರಣ ಸಂಗಮದಲ್ಲಿ 'ಕರ್ನಾಟಕ ಸರಕಾರ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಒಂದು ಚಿಂತನೆ' ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಬಸವದಳದ ಅಧ್ಯಕ್ಷ, ಶರಣ ವಿ.ಕೆ. ಕರೇಗೌಡ್ರ ವಹಿಸುವರು. ಶರಣತತ್ವ ಚಿಂತಕಿ ಶರಣೆ ಗೌರಕ್ಕ ಎನ್.ಬಡಿಗಣ್ಣವರ ಗದಗ ಉಪನ್ಯಾಸ ಮಾಡುವರು. ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

# ಸದೃಢ ಕುಟುಂಬಕ್ಕೆ ಆರೋಗ್ಯ ಮುಖ್ಯ

■ **ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಸದೃಢ ಕುಟುಂಬಕ್ಕೆ ಮಹಿಳೆಯರ ಹಾಗೂ ಮಕ್ಕಳ ಆರೋಗ್ಯ ಮುಖ್ಯ ಎಂದು ಕುರ್ತಕೋಟಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಅಪ್ಪಣ್ಣಾ ಇನಾಮತಿ ಹೇಳಿದರು.

ಅವರು ಪಟ್ಟಣದ ಸಮಿಪದ ಕುರ್ತಕೋಟಿ ಗ್ರಾಮದ ಅಂಗನವಾಡಿ ಸಂಖ್ಯೆ 296ರಲ್ಲಿ ಕುರ್ತಕೋಟಿ ಪ್ರಾಥಮಿಕ ಆರೋಗ್ಯ ಕೇಂದ್ರದ ಆಶ್ರಯದಲ್ಲಿ ಜರುಗಿದ 'ಸ್ವಸ್ಥ ನಾರಿ ಸಶಕ್ತ ಪರಿವಾರ' ಹಾಗೂ ಪೋಷಣಾ ಅಭಿಯಾನ ಉದ್ಘಾಟಿಸಿ ಮಾತನಾಡಿದರು.

ಇಂದು ಆಧುನಿಕ ತಂತ್ರಜ್ಞಾನ ಬೆಳೆದಂತೆ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದ್ದು, ಕುಟುಂಬದ ಮಹಿಳೆ ಆರೋಗ್ಯದಿಂದಿದ್ದರೆ ಪರಿವಾರ ಸಂಪೂರ್ಣ ಆರೋಗ್ಯದಿಂದಿರಲು ಸಾಧ್ಯವಾಗುತ್ತದೆ. ಕೇಂದ್ರ ಸರಕಾರದ



ಮಹತ್ವಾಕಾಂಕ್ಷಿ ಯೋಜನೆಯನ್ನು ಪ್ರತಿಯೊಬ್ಬ ಮಹಿಳೆಯೂ ಸದುಪಯೋಗಪಡಿಸಿಕೊಂಡು ಸದೃಢ ಪರಿವಾರ ಹೊಂದಿದಲ್ಲಿ ಸದೃಢ ಸಮಾಜ ನಿರ್ಮಿಸಲು ಸಾಧ್ಯವಾಗುತ್ತದೆ. ಮಹಿಳೆಯರ ಆರೋಗ್ಯದಲ್ಲಿ ಏರುಪೇರು ಆದಲ್ಲಿ ತಕ್ಷಣವೇ ಸಮೀಪದ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಪರೀಕ್ಷಿಸಿಕೊಳ್ಳಬೇಕು. ಗುಣಮಟ್ಟದ ಪೌಷ್ಠಿಕ ಆಹಾರವನ್ನು ನಿತ್ಯ ಸೇವಿಸಬೇಕು ಎಂದರು.

ಕುರ್ತಕೋಟಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ವಿಕ್ರಂ ಸಿಂಗ್ ರಾಠೋಡ, ಸಿಡಿಪಿಓ ಹುಲಿಗೆಮ್ಮ ಜೋಗೇರ, ಕಾವೇರಿ ಚಿಗರು, ಮಧುಶ್ರೀ, ವಿಜಯಲಕ್ಷ್ಮಿ ಹಿರೇಮಠ, ಮಂಗಳಾ ಕೆಂಭಾವಿಮಠ, ರೇಣುಕಾ ಬಜಪ್ಪನವರ, ವಿನೋದಾ ಹೊಂಬಳ, ರೇಣುಕಾ, ಎಸ್.ಎನ್. ಮಾದಪ್ಪನವರ, ದೇವಕ್ಕಾ ಹೂಗಾರ, ಶಾರದಾ ಹನಕನಹಳ್ಳಿ, ಶೋಭಾ ಕಮ್ಮಾರ, ಶೋಭಾ ಕೆಂಚಣ್ಣವರ, ಶೋಭಾ ಮುಳಗುಂದ ಮುಂತಾದವರಿದ್ದರು.

**ಶಾಲಾ ಕೊಠಡಿ, ಗ್ರಾಮ ಪಂಚಾಯಿತಿ ನೂತನ ಕಟ್ಟಡ ಉದ್ಘಾಟಿಸಿದ ಶಾಸಕ ಜಿ.ಎಸ್. ಪಾಟೀಲ**

# ಸರಕಾರದ ಅನುದಾನ ಸದ್ಬಳಕೆಯಾಗಲಿ




ಗ್ರಾಮಸ್ಥರ ಬೇಡಿಕೆಯಂತೆ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಗಳ ಅಭಿವೃದ್ಧಿಗೆ ಅನುದಾನ ಒದಗಿಸಲಾಗಿದ್ದು, ಮಳೆ ಕಡಿಮೆಯಾಗುತ್ತಿದ್ದಂತೆ ಕೆಲಸ ಆರಂಭಿಸಲಾಗುವುದು. ಗ್ರಾಮದಲ್ಲಿ ಸಿಸಿ ರಸ್ತೆಗಳನ್ನು ನಿರ್ಮಿಸಲು ಅನುದಾನ ಮೀಸಲಿಡಲಾಗಿದೆ. ಗ್ರಾಮದಲ್ಲಿ ನೂತನ ಗ್ರಾ.ಪಂ ಕಟ್ಟಡ ಉದ್ಘಾಟನೆಗೊಂಡಿದ್ದು, ಸದಸ್ಯರು ತಮ್ಮ ವಾರ್ಡ್‌ಗಳ ಪ್ರಗತಿಗೆ ಶ್ರಮಿಸಬೇಕು ಎಂದು ಶಾಸಕ ಜಿ.ಎಸ್. ಪಾಟೀಲ ಸಲಹೆ ನೀಡಿದರು.

■ **ವಿಜಯಸಾಕ್ಷಿ ಸುದ್ದಿ, ರೋಣ**

ಗುಳಗುಳಿ ಗ್ರಾಮದ ಅಭಿವೃದ್ಧಿಗೆ ಮತ್ತಷ್ಟು ಅನುದಾನವನ್ನು ಒದಗಿಸಲಾಗುವುದು. 1 ಲಕ್ಷ ಲೀಟರ್ ಸಾಮರ್ಥ್ಯದ ಕುಡಿಯುವ ನೀರು ಸಂಗ್ರಹ ಘಟಕಕ್ಕೆ ಶಿಘ್ರ ಚಾಲನೆ ನೀಡಲಾಗುವುದು ಎಂದು ರಾಜ್ಯ ಖನಿಜ ನಿಗಮದ ಅಧ್ಯಕ್ಷರು, ಶಾಸಕರಾದ ಜಿ.ಎಸ್. ಪಾಟೀಲ ಹೇಳಿದರು.

ಅವರು ಶುಕ್ರವಾರ ಗುಳಗುಳಿ ಗ್ರಾಮದಲ್ಲಿ ವಿವೇಕ ಯೋಜನೆಯಡಿಯಲ್ಲಿ ನಿರ್ಮಾಣಗೊಂಡ ಶಾಲಾ ಕೊಠಡಿ ಹಾಗೂ ಗ್ರಾಮ ಪಂಚಾಯಿತಿ ನೂತನ ಕಟ್ಟಡ ಉದ್ಘಾಟನೆ ಮತ್ತು ಗ್ರಂಥಾಲಯ ಕಟ್ಟಡ ನಿರ್ಮಾಣಕ್ಕೆ ಭೂಮಿಪೂಜೆಯನ್ನು ನೆರವೇರಿಸಿ ಮಾತನಾಡಿದರು.

ಗ್ರಾಮೀಣ ಭಾಗಗಳಲ್ಲಿ ನಿರ್ಮಾಣಗೊಳ್ಳುವ ಕಟ್ಟಡಗಳು ಬಾಳಿಕೆ ಬರುಬೇಕು. ಅವಕಾಶಗಳು ಸಿಕ್ಕಾಗ ಗ್ರಾಮೀಣ ಭಾಗಗಳಿಗೆ ಯೋಜನೆಗಳು ದೊರಕುತ್ತವೆ. ಹೀಗಿದ್ದಾಗ ಕಟ್ಟಡಗಳು ಕಳಪೆ ಗುಣಮಟ್ಟದಿಂದ ಕೂಡಿದ್ದರೆ ಪ್ರಯೋಜನವಿಲ್ಲ. ಅಧಿಕಾರಿಗಳೇನು ಕಟ್ಟಡ ನಿರ್ಮಾಣದ ಕುರಿತು ಗಮನ ಹರಿಸುವುದಿಲ್ಲವೇ, ಸರಕಾರದ ಅನುದಾನ ಸೂಕ್ತ ರೀತಿಯಲ್ಲಿ ಬಳಕೆಯಾಗಬೇಕು ಎಂದು ಪಿಡಬ್ಲ್ಯುಡಿ ಮತ್ತು ಜಿ.ಪಂ ಅಭಿಯಂತರರ ವಿರುದ್ಧ ಆಕ್ರೋಶ ಹೊರಹಾಕಿದರು.

ಕಚೇರಿಯಲ್ಲಿ ಕುಳಿತುಕೊಳ್ಳುವ ಬದಲು ಕಾಮಗಾರಿಗಳು ನಡೆಯುತ್ತಿರುವ ಸ್ಥಳಗಳಿಗೆ ಹೋಗಿ ಪರಿಶೀಲನೆ ನಡೆಸಿ ಎಂದು ಸ್ಥಳದಲ್ಲಿದ್ದ ಅಭಿಯಂತರರಿಗೆ ಶಾಸಕರು ಸೂಚಿಸಿದರು. ಗಜೇಂದ್ರಗಡ ನಗರದಿಂದ ಗುಳಗುಳಿ ಮಾರ್ಗವಾಗಿ ಬದಾಮಿಗೆ ಬಸ್ ಸೌಲಭ್ಯ ಕಲ್ಪಿಸಬೇಕು ಎನ್ನುವುದು ಗ್ರಾಮಸ್ಥರ ಬಹು ಮುಖ್ಯ ಬೇಡಿಕೆಯಾಗಿತ್ತು. ಗ್ರಾಮಸ್ಥರ ಇಚ್ಛೆಯಂತೆ ಅದಕ್ಕೂ ಸಹ ಇಂದು ಚಾಲನೆ ನೀಡಲಾಗಿದ್ದು, ಗ್ರಾಮಸ್ಥರಿಗೆ ಹಾಗೂ ವಿದ್ಯಾರ್ಥಿಗಳಿಗೆ ಅನುಕೂಲವಾಗಲಿದೆ. ಈ ಬಸ್ ಸೌಲಭ್ಯವು ವ್ಯಾಪಾರ ವಹಿವಾಟುಗಳಿಗೆ ಮತ್ತು ರೈತರಿಗೆ ಆರ್ಥಿಕ ಶಕ್ತಿ ಒದಗಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಎಂದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ವೀರಣ್ಣ ಶೆಟ್ಟರ, ಶರಣಗೌಡ ಪಾಟೀಲ, ವಿ.ಬಿ. ಸೋಮನಕಟ್ಟಿಮಠ, ಮಂಜುಳಾ ಹುಲ್ಲಣ್ಣವರ, ಮೋಹನ್ ಹುಲ್ಲಣ್ಣವರ, ಶ್ರೀಶೈಲಪ್ಪ ಹೆಗ್ಗಣ್ಣವರ, ಯಮನೂರಪ್ಪ ತಳವಾರ, ಕುಬೇರಪ್ಪ ಮುತಾರಿ, ಚಂದ್ರಶೇಖರ ಗೊರವರ, ತಾ.ಪಂ ಇಓ ಚಂದ್ರಶೇಖರ ಕಂದಕೂರ ಸೇರಿದಂತೆ ಗ್ರಾ.ಪಂ ಪದಾಧಿಕಾರಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು, ಅಭಿಯಂತರರು, ಮುಖಂಡರು ಉಪಸ್ಥಿತರಿದ್ದರು.

# ಸ್ವಚ್ಛತಾ ಹೀ ಸೇವಾ ಪಾಕ್ಷಿಕ ಕಾರ್ಯಕ್ರಮ

■ **ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಜಯಂತಿ ಪ್ರಯುಕ್ತ ಪ್ರತಿ ವರ್ಷ ಅಕ್ಟೋಬರ್ 2ನ್ನು ಸ್ವಚ್ಛ ಭಾರತ್ ದಿನವನ್ನಾಗಿ ಆಚರಿಸುತ್ತಿದ್ದು, ಪೂರ್ವಭಾವಿಯಾಗಿ ಹಲವು ಜಾಗೃತಿ ಕಾರ್ಯಕ್ರಮ ಹಾಗೂ ಸಾಮೂಹಿಕ ಸ್ವಚ್ಛತಾ ಶ್ರಮದಾನಗಳನ್ನು ಅಲ್ಲಲ್ಲಿ ಹಮ್ಮಿಕೊಳ್ಳಲಾಗುತ್ತಿದೆ.

ನಗರ ಮತ್ತು ಗ್ರಾಮೀಣ ಪ್ರದೇಶದ ಜನರಲ್ಲಿ ನೈರ್ಮಲ್ಯದ ಕುರಿತು ಅರಿವು ಮೂಡಿಸುವ ಉದ್ದೇಶದಿಂದ ಕೇಂದ್ರ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಜಲಶಕ್ತಿ ಮಂತ್ರಾಲಯ ಹಾಗೂ ಕೇಂದ್ರ ನಗರ ವಸತಿ ವ್ಯವಹಾರ ಗಳ ಸಚಿವಾಲಯ ಸೆಪ್ಟೆಂಬರ್ 17ರಿಂದ ಅಕ್ಟೋಬರ್ 2ರವರೆಗೆ 'ಸ್ವಚ್ಛತಾ ಹೀ ಸೇವಾ ಪಾಕ್ಷಿಕ-2025' ಅಭಿಯಾನವನ್ನು 'ಸ್ವಚ್ಛೋತ್ಸವ'



ಎಂಬ ಘೋಷವಾಕ್ಯದೊಂದಿಗೆ ಆಚರಿಸುತ್ತಿದೆ.

ಸದರ ಕಾರ್ಯಕ್ರಮದಡಿ ತಾಲೂಕಿನ ಬೆಳಟ್ಟಿ ಗ್ರಾಮದಲ್ಲಿ ಸ್ವಚ್ಛ ಭಾರತ್ ಮಿಷನ್ ಗ್ರಾಮೀಣ ಯೋಜನೆಯಡಿ ಸ್ವಚ್ಛತಾ ಹೀ ಸೇವಾ ಕಾರ್ಯಕ್ರಮದ ಅಂಗವಾಗಿ ಆಯೋಜಿಸಿದ್ದ ಜಾಗೃತಿ ಜಾಥಾಕ್ಕೆ ಗ್ರಾಮ ಪಂಚಾಯಿತಿ ಅಧ್ಯಕ್ಷರು ಚಾಲನೆ ನೀಡಿ, ಸ್ವಚ್ಚತೆಯ ಪ್ರತಿಜ್ಞಾವಿಧಿ ಬೋಧಿಸಿ ಸಮಾರಂಭದಲ್ಲಿ ಸ್ವಚ್ಛ ವಾಹಿನಿ ವಾಹನ ಚಾಲಕಿ ಹಾಗೂ ಗ್ರಾಮ ಪಂಚಾಯಿತಿಯಲ್ಲಿ ಕೆಲಸ ನಿರ್ವಹಿಸುವ ಸಫಾಯಿ ಕರ್ಮಚಾರಿಗಳನ್ನು ಸನ್ಮಾನಿಸಿದರು.

ಗ್ರಾ.ಪಂ ಉಪಾಧ್ಯಕ್ಷರು, ಸರ್ವ ಸದಸ್ಯರು, ಸಿಬ್ಬಂದಿಗಳು, ಆಶಾ-ಅಂಗನವಾಡಿ ಕಾರ್ಯಕರ್ತೆಯರು ಭಾಗವಹಿಸಿದ್ದರು.

# ಮಹರ್ಷಿ ವಾಲ್ಮೀಕಿ ಜಯಂತಿ ಅದ್ಧೂರಿ ಆಚರಣೆಗೆ ನಿರ್ಧಾರ



■ **ವಿಜಯಸಾಕ್ಷಿ ಸುದ್ದಿ, ರೋಣ**

ಆದಿಕವಿ ಮಹರ್ಷಿ ವಾಲ್ಮೀಕಿ ಮಹಾಋಷಿಗಳ ಜಯಂತ್ಯುತ್ಸವವನ್ನು ಅ. 7ರಂದು ಅದ್ದೂರಿಯಾಗಿ ಆಚರಿಸಲಾಗುವುದು ಎಂದು ವಾಲ್ಮೀಕಿ ಸಮಾಜದ ಅಧ್ಯಕ್ಷ ಬಸವರಾಜ ತಳವಾರ ಹೇಳಿದರು.

ಅವರು ಶನಿವಾರ ತಹಸೀಲ್ದಾರರ ಅಧ್ಯಕ್ಷತೆಯಲ್ಲಿ ಕಚೇರಿಯ ಸಭಾಂಗಣದಲ್ಲಿ ಜರುಗಿದ ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು.

ಸರಕಾರ ನಿಗದಿಪಡಿಸಿದಂತೆ ಅ. 7ರಂದು ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಆಚರಿಸಲು ಸಮಾಜದ ಯುವಕರು ಮತ್ತು ಮುಖಂಡರು ನಿರ್ಧರಿಸಿದ್ದಾರೆ. ಅದೇ ದಿನ ಸಮಾಜದ ವತಿಯಿಂದ ಜಯಂತ್ಯುತ್ಸವವನ್ನು ಆಚರಿಸಲು ತೀರ್ಮಾನಿಸಲಾಗಿದೆ ಎಂದರು.

ತಹಸೀಲ್ದಾರ ನಾಗರಾಜ ಕೆ ಮಾತನಾಡಿ, ಸರಕಾರ ನಿಗದಿಪಡಿಸಿದ ದಿನದಂದು ತಾಲೂಕಾ ಮಟ್ಟದ ವಿವಿಧ ಇಲಾಖೆಗಳಲ್ಲಿ ಮಹರ್ಷಿ ವಾಲ್ಮೀಕಿಯವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಅಧಿಕಾರಿಗಳು ತಹಸೀಲ್ದಾರ ಕಚೇರಿಗೆ ಆಗಮಿಸುತ್ತಾರೆ. ಇಲ್ಲಿ ತಾಲೂಕಾಡಳಿತದಿಂದ ಮಹರ್ಷಿ ವಾಲ್ಮೀಕಿಯವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲಾಗುತ್ತದೆ. ಈ ಕಾರ್ಯಕ್ರಮದಲ್ಲಿಯೂ ಸಮಾಜದ ಬಂಧುಗಳು ಮತ್ತು ನಾಗರಿಕರು ಪಾಲ್ಗೊಳ್ಳಬೇಕು. ಸಮಾಜದವರ ಇಚ್ಛೆಯಂತೆ ಜಯಂತ್ಯುತ್ಸವವನ್ನು ಅದ್ಧೂರಿಯಾಗಿ ಆಚರಿಸಲು ತಾಲೂಕಾಡಳಿತ ಸಹಕಾರ ನೀಡಲಿದೆ ಎಂದರು.

ತಾ.ಪಂ ಇಓ ಚಂದ್ರಶೇಖರ ಕಂದಕೂರ, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ ಗೀತಾ ಆಲೂರ, ಆರ್.ಎಲ್. ನಾಯಕರ, ಡಾ. ಬಿ.ಎಸ್. ಭಜಂತ್ರಿ, ಕುಮಾರ ಗೌಡನ್ನವರ, ಸಂತೋಷ ಕಡಿವಾಲ ಸೇರಿದಂತೆ ಸಮಾಜದ ಮುಖಂಡರು, ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿಗಳು ಉಪಸ್ಥಿತರಿದ್ದರು.



ಗದಗ ನಗರದ ಪ್ರಭುವಿನೆಡೆಗೆ ಪ್ರಭುತ್ವ ಘಟಕ ಹಾಗೂ ಇಂದಿರಾವನ ವೀಕ್ಷಣೆಗೆ ಆಗಮಿಸಿದ ಸಿಎಂ ಸಿದ್ದರಾಮಯ್ಯ ಅವರನ್ನು ಗದಗ ತಾಲೂಕು ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷರಾದ ಅಶೋಕ ಮಂದಾಲಿ ಸ್ವಾಗತಿಸಿದರು. ಈ ಸಂದರ್ಭದಲ್ಲಿ ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಸೇರಿದಂತೆ ಮುಖಂಡರು ಹಾಜರಿದ್ದರು.


**ಕರ್ನಾಟಕ ಸರ್ಕಾರ**
**(ರಾಷ್ಟ್ರೀಯ ಆರೋಗ್ಯ ಅಭಿಯಾನ)**
**ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೊಸೈಟಿ, ಗದಗ.**
**ಜಿಲ್ಲಾ ಕಾರ್ಯಕ್ರಮ ನಿರ್ವಹಣಾ ಘಟಕ, ಗದಗ**
**E-mail id:rchogadag@gmail.com**

ಕ್ರ.ಸಂ:ಜಿಆಕುಕಾಸೊಗ/ಎನ್.ಹೆಚ್.ಎಂ./ನೇಮಕಾತಿ-ಪ್ರಕಟಣೆ/277/2025-26
ದಿನಾಂಕ:20.09.2025

**ನೇಮಕಾತಿ ತಿದ್ದುಪಡಿ ಪ್ರಕಟಣೆ**

ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ರಾಜ್ಯ ಮಟ್ಟದ ಮಾನವ ಸಂಪನ್ಮೂಲ **Rop-2025-26** ಅನುಮೋದನೆಯಂತೆ ಸಂಚಾರಿ ಆರೋಗ್ಯ ಘಟಕಗಳಿಗೆ ಅನುಮೋದನೆಗೊಂಡ **02** ಎಮ್,ಬಿ,ಬಿಎಸ್ ವೈದ್ಯಾಧಿಕಾರಿಗಳು, 02 ಶುಶ್ರೂಷ ಅಧಿಕಾರಿಗಳ ಮತ್ತು **02** ಪ್ರಯೋಗಶಾಲಾ ತಂತ್ರಜ್ಞರುಗಳ ಹುದ್ದೆಗಳು ಖಾಲಿಯಿದ್ದು ಸದರಿ ಹುದ್ದೆಗಳಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು. ದಿನಾಂಕ : **20-9-2025** ಪತ್ರಿಕೆಗಳಲ್ಲಿ ಪ್ರಕಟಣೆಗೊಂಡಂತೆ ಶುಶ್ರೂಷಕರುಗಳ ಹುದ್ದೆಗೆ ರೂ. **22,000/-** ಮತ್ತು ಪ್ರಯೋಗ ಶಾಲಾ ತಂತ್ರಜ್ಞರುಗಳ ಹುದ್ದೆಗೆ ರೂ. **20,000/-** ವೇತನವನ್ನು ನಿಗದಿಪಡಿಸಲಾಗಿತ್ತು ಅದರ ಬದಲಾಗಿ 2025-26 ನೇ ಸಾಲಿನ ಕಾರ್ಮಿಕ ಆಯುಕ್ತಾಲಯ ನಿಗದಿಪಡಿಸಿದ ಕನಿಷ್ಠ ದರದಂತೆ ಎಂದು ತಿದ್ದುಪಡಿ ಮಾಡಲಾಗಿದೆ.

**ಸಹಿ/-ಉಪಾಧ್ಯಕ್ಷರು,**
**ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ, ಗದಗ**

ವಾಸಾಸಂಇ/ಗದಗ/ಕೆ.ಎಸ್.ಎಂ.ಸಿ.ಎ/296/2025-26


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka